ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 245 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 18–04–2024 ಗುರುವಾರ | ಪುಟ: 4 | ಬೆಲೆ : ರೂ.2–00
Volume - 01 Issue - 245 | Title- Code: KARKAN 28269 | Chitradurga | Date: 18-04-2024 Thursday | Page: 4 | Price: Rs. 2-00

ಒಳಪುಟದ ಸುದ್ದಿಗಳು
ಚಂದ್ರಪ್ಪನ ಗೆಲುವಿಗಾಗಿ ಗಣಪತಿಗೆ 101 ತೆಂಗಿನಕಾಯಿ ಅರ್ಪಣೆ 2
ಮಾದಿಗ ಒಳಮೀಸಲಾತಿ ನೀಡಲು ಖರ್ಗೆ ಅಡ್ಡಿ: ಮಂದಕೃಷ್ಣಮಾದಿಗ ಆರೋಪ 3
ರಾಹುಲ್ ಮೊದಲು ಕಾಂಗ್ರೆಸ್ ಹಗರಣಗಳನ್ನು ಏಕೆ ಮುಚ್ಚಿಡುತ್ತಿದ್ದಾರೆ? 4

ಸುದ್ದಿ, ಜಾಹಿರಾತಿಗೆ 9686622252

**ಶುಭ ನುಡಿ**


ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

### ಕಾಂಗ್ರೆಸ್ ಬಹಿರಂಗ ಪ್ರಚಾರ ಸಭೆಯಲ್ಲಿ ಬಾರೀ ಜನಸ್ತೋಮ

# ನುಡಿದಂತೆ ನಡೆದಿರುವ ಕಾಂಗ್ರೆಸ್‌ಗೆ ಮತ ನೀಡಿ: ಶಾಸಕ ಟಿ.ರಘುಮೂರ್ತಿ





» ನಮ್ಮ ಜನ ಸಮಾಚಾರ

ಚಿತ್ರದುರ್ಗ:ಚಳ್ಳಕೆರೆ ಕ್ಷೇತ್ರದಲ್ಲಿ ಸಂಪೂರ್ಣ ಅಭಿವೃದ್ಧಿ ಅನುದಾನ ನೀಡಿದ್ದು ಕಾಂಗ್ರೆಸ್ ಸರ್ಕಾರ ಅವಧಿಯಲ್ಲಿ ಎಂಬ ಹೆಗ್ಗಳಿಕೆ ನನಗಿದ್ದು, ಅಭಿವೃದ್ಧಿ ಜೊತೆಗೆ ಗ್ಯಾರೆಂಟಿ ಯೋಜನೆಗಳನ್ನು ಜನರಿಗೆ ಮುಟ್ಟಿಸಿ ನುಡಿದಂತೆ ನಡೆದಿರುವ ನಮ್ಮ ಅಭ್ಯರ್ಥಿ ಚಂದ್ರಪ್ಪ ಅವರಿಗೆ ಈ ಬಾರಿ ಆಶೀರ್ವಾದ ಮಾಡುವ ಮೂಲಕ ಬಿಜೆಪಿ ತಕ್ಕ ಪಾಠ ಕಲಿಸಿ ಎಂದು ಶಾಸಕ ಟಿ.ರಘುಮೂರ್ತಿ ವಿಶ್ವಾಸ ವ್ಯಕ್ತಪಡಿಸಿದರು.

ತಾಲೂಕಿನ ತುರುವನೂರು ಹೋಬಳಿಯ ತುರುವನೂರು ಗ್ರಾಮದಲ್ಲಿ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಪರವಾಗಿ ಹೋಬಳಿ ಮಟ್ಟದ ಬೃಹತ್ ಬಹಿರಂಗ ಕಾರ್ಯಕರ್ತರ ಮತ್ತು ಮುಖಂಡರ ಪ್ರಚಾರ ಸಭೆಯನ್ನು ಉದ್ಘಾಟಿಸಿ ಮಾತನಾಡಿದರು.

ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಚಳ್ಳಕೆರೆ ಕ್ಷೇತ್ರಕ್ಕೆಸಾವಿರಾರು ಕೋಟಿರೂಪಾಯಿ ಅನುದಾನ ನೀಡುವ ಮೂಲಕ ಸಮಗ್ರ ಅಭಿವೃದ್ಧಿಗೆ ಸಹಕಾರ ನೀಡಿದೆ. ಬಿಜೆಪಿ ಸರ್ಕಾರದ ಅವಧಿಯಲ್ಲಿ ನಮಗೆ ಅಭಿವೃದ್ಧಿಗೆ ಹಣ ನೀಡಲಿಲ್ಲ. ಆದರೆ ನಾವು ನಮ್ಮ ಅನುದಾನ ಬಳಸಿಕೊಂಡು ಸಾಧ್ಯವಾದಷ್ಟು ಕೆಲಸ ಮಾಡಿದ್ದೇನೆ. ಜನರು ಕಾಂಗ್ರೆಸ್ ಅಭಿವೃದ್ಧಿ ಕಾರ್ಯ ಮರೆಯಲ್ಲ. ಜನರಿಗೆ ಕೃತಜ್ಞತೆ ಮನೋಭಾವ ಇದ್ದು ಕಾಂಗ್ರೆಸ್ ಪಕ್ಷಕ್ಕೆ ಮತ ಹಾಕುತ್ತಾರೆ ಎಂದರು.

ಕೇಂದ್ರ ಸರ್ಕಾರದ ಗ್ಯಾರೆಂಟಿ ಯೋಜನೆಗಳು ರೈತಪರ ಮತ್ತು ಜನಪರವಾಗಿದ್ದು ಕೇಂದ್ರ ಗ್ಯಾರೆಂಟಿ ಯೋಜನೆಗಳಿಂದ ಜನರಿಗೆ ಬಡತನ ಕಾಡುವುದಿಲ್ಲ.ಬಿಜೆಪಿ ಸರ್ಕಾರದವರು ಧರ್ಮದ ಮೇಲೆ ರಾಜಕಾರಣ ಮಾಡುತ್ತಾರೆ. ನಾವು ಅಭಿವೃದ್ಧಿ ಮೇಲೆ ರಾಜಕಾರಣ ಮಾಡುತ್ತೇನೆ. ಜನರು ಪದೇ ಪದೇ ಮತ ಹಾಕಲು ದಡ್ಡರಲ್ಲ. ಎರಡು ಬಾರಿ ಅವಕಾಶ ನೀಡಿದರು ಬಿಜೆಪಿ ಸರ್ಕಾರ ಜನಸಾಮಾನ್ಯರಿಗೆ ಬೆಲೆ ಏರಿಕೆ ಬರೆ ಹಾಕಿದ್ದು ಜನರು ಮರೆಯಲ್ಲ. ಬಿಜೆಪಿ ಸರ್ಕಾರವನ್ನು ಬದಲಾಯಿಸಲು ಜನರು ನಿರ್ಧಾರ ಮಾಡಿದ್ದಾರೆ ಎಂದು ಬಿಜೆಪಿ ವಿರುದ್ಧ ಕಿಡಿಕಾರಿದರು.

ರಾಜ್ಯದಲ್ಲಿ ಅತಿ ಸ್ಥಾನಗಳನ್ನು ಕಾಂಗ್ರೆಸ್ ಗೆಲುವು ಸಾಧಿಸಲಿದೆ.ರಾಜ್ಯ ಸರ್ಕಾರದ ಐದು ಗ್ಯಾರೆಂಟಿಗಳು ಜನರಿಗೆ ತಲುಪಿದ್ದು ಜನರೇ ಗ್ಯಾರೆಂಟಿ ಯೋಜನೆಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸುತ್ತಿದ್ದು ಚಿತ್ರದುರ್ಗ ಲೋಕಸಭೆಯಲ್ಲಿ ಉತ್ತಮ ಅಭ್ಯರ್ಥಿ ಚಂದ್ರಪ್ಪ ಗೆಲುವು ಗ್ಯಾರೆಂಟಿ ಎಂದು ತಿಳಿಸಿದರು.

ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾದ ಶ ಬಿ.ಎನ್.ಚಂದ್ರಪ್ಪ ಮಾತನಾಡಿ

ಪ್ರಜಾಪ್ರಭುತ್ವದ ಹಬ್ಬವಾಗಿರುವ ಲೋಕಸಭಾ ಚುನಾವಣೆಯಿಂದ ಈ ದೇಶದ ಜನರು ಹೊಸ ಬದಲಾವಣೆಯನ್ನು ಬಯಸಿದ್ದಾರೆ. ಚಿತ್ರದುರ್ಗ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಎಲ್ಲಾ ಶಾಸಕರ ಜೊತೆಯಾಗಿ ಕೆಲಸ ಮಾಡುತ್ತೇನೆ. ಭದ್ರಾ ಮೇಲ್ದಂಡೆ ಯೋಜನೆ ಬಗ್ಗೆ ಕೇಂದ್ರದಲ್ಲಿ ಮಾತನಾಡಿ ನ್ಯಾಯ ಒದಗಿಸುತ್ತೇನೆ. ಯುವ ಸಮೂಹಕ್ಕೆ ಉದ್ಯೋಗ ಭರವಸೆ ನೀಡಿ ವಿಫಲವಾಗಿದ್ದಾರೆ.

ಕೇಂದ್ರದ ಕೋಮುವಾದಿ ಸರ್ವಾಧಿಕಾರಿ ಧೋರಣೆಗಳನ್ನು ಖಂಡಿಸಿ ರಾಜಕೀಯ ಮೌಲ್ಯಗಳನ್ನು ಸಂರಕ್ಷಣೆ ಮಾಡುವ ಕಾರಣಕ್ಕಾಗಿ ಹಾಗೂ ಸಂವಿಧಾನದ ಆಶಯಗಳನ್ನು ರಕ್ಷಣೆ ಮಾಡುವ ಕಾರಣಕ್ಕಾಗಿ ಸಮಾನ ಮನಸ್ಕ ಪಕ್ಷಗಳು ಒಂದಾಗಿ ಸಂವಿಧಾಮ ಉಳಿಸಬೇಕಿದೆ ಎಂದರು.

ಈ ಸಂದರ್ಭದಲ್ಲಿ ಅಖಿಲ ಭಾರತೀಯ ಕಾಂಗ್ರೆಸ್ ಸಮಿತಿ ಕಾರ್ಯದರ್ಶಿ ಮಯೂರ್ ಜಯಕುಮಾರ್, ಆಗ್ನೇಯ ಪದವೀಧರ ಮತ್ತು ಶಿಕ್ಷಕರ ಕ್ಷೇತ್ರದ ಅಭ್ಯರ್ಥಿ ಡಿ.ಟಿ.ಶ್ರೀನಿವಾಸ್ , ಮಾಜಿ ಜಿ.ಪಂ.ಸದಸ್ಯರಾದ ರವಿಕುಮಾರ್, ಪ್ರಕಾಶ್ ಮೂರ್ತಿ, ಬಾಬುರೆಡ್ಡಿ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ತಾಜ್ ಪೀರ್, ಮುಖಂಡ ಓ.ಶಂಕರ್, ಪ್ರಸನ್ನಕುಮಾರ್, ಚಳ್ಳಕೆರೆ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ವೀರಭದ್ರಪ್ಪ, ಶಶಿಧರ್ ಮತ್ತು ತುರುವನೂರು ಹೋಬಳಿ ವ್ಯಾಪ್ತಿಯ ಗ್ರಾಮ ಪಂಚಾಯತಿ ಅಧ್ಯಕ್ಷರು, ಸದಸ್ಯರು ಮತ್ತು ಕಾರ್ಯಕರ್ತರು ಭಾಗವಹಿಸಿದ್ದರು.

> ಕೋಮುವಾದಿ ಬಿಜೆಪಿಯನ್ನು ಸೋಲಿಸಿ ಕಾಂಗ್ರೆಸ್ ಅಭ್ಯರ್ಥಿ ಚಂದ್ರಪ್ಪ ಅವರನ್ನುಯ ಗೆಲ್ಲಿಸುವ ಮೂಲಕ ಕಾಂಗ್ರೆಸ್ ಬಲಪಡಿಸಬೇಕಿದೆ. ಕಳೆದ ಅವಧಿಯಲ್ಲಿ ಚಂದ್ರಪ್ಪ ಉತ್ತಮ ಕಾರ್ಯಗಳನ್ನು ಮಾಡುವ ಮೂಲಕ ಜಿಲ್ಲೆಯ ಜನರ ಮನೆ ಮಾತಗಿದ್ದು ಎಲ್ಲಾ ಕಾಂಗ್ರೆಸ್ ಪಕ್ಷಕ್ಕೆ ಮತ ಚಲಾಯಿಸಿ ಎಂದು ಮನವಿ ಮಾಡಿದರು.
> » **ಹೆಚ್.ಆಂಜನೇಯ ಮಾಜಿ ಸಚಿವರು**

> ಕಾಂಗ್ರೆಸ್ ಪಕ್ಷದ ಐದು ಗ್ಯಾರೆಂಟಿ ಯೋಜನೆಗಳನ್ನು ಜಾರಿಗೆ ತಂದಿದ್ದು ಮಹಿಳೆಯರಿಗೆ ಸಾಕಷ್ಟು ಅನುಕೂಲವಾಗಿದೆ. ಎಲ್ಲಾ ಸಮುದಾಯಗಳಿಗೆ ಸಾಮಾಜಿಕ ನ್ಯಾಯ ಒದಗಿಸಲು ಕಾಂಗ್ರೆಸ್ ಪಕ್ಷದಿಂದ ಮಾತ್ರ ಸಾಧ್ಯ. ಆ ದೃಷ್ಟಿಯಿಂದ ಕಾಂಗ್ರೆಸ್ ಅಭ್ಯರ್ಥಿಗೆ ಹೆಚ್ಚಿನ ಮತಗಳನ್ನು ನೀಡಿ ಗೆಲ್ಲಿಸಿ.
> » **ಪೂರ್ಣಿಮಾ ಶ್ರೀನಿವಾಸ್ ಮಾಜಿ ಶಾಸಕರು ಹಿರಿಯೂರು**

> ಚಿತ್ರದುರ್ಗ ಜಿಲ್ಲೆಗೆ ಗೋವಿಂದ ಕಾರಜೋಳನಕೊಡಿಗೆ ಏನು, ಜಿಲ್ಲೆಯ ಅಭಿವೃದ್ಧಿ ಆಗಿಲ್ಲ ಎನ್ನುತ್ತಾರೆ. ನಿಮ್ಮ ಈ ಸುಳ್ಳು ಪ್ರಚಾರ ನಿಲ್ಲಸಿ. ನೀರಾವರಿ ಸಚಿವರಾಗಿದ್ದ ಕಾರಜೋಳ ಎಷ್ಟು ಬಾರಿ ಭದ್ರಾ ವಿಕ್ಷಣೆ ಮಾಡಿದ್ದಿರಿ. ಮತ ಕೇಳುವ ಯಾವ ನೈತಿಕತೆ ನಿಮಗಿಲ್ಲ. ಜನರು ಬಿಜೆಪಿ ಸುಳ್ಳು ಭರವಸೆಗೆ ಕಿವಿಗೊಡದೆ ಕಾಂಗ್ರೆಸ್ ಅಭ್ಯರ್ಥಿ ಗೆಲ್ಲಸುವ ಮೂಲಕ ಜಿಲ್ಲೆಯ ಅಭಿವೃದ್ಧಿಗೆ ಸಹಕಾರ ನೀಡಿ ಎಂದರು.
> » **ಬಿ.ಜಿ.ಗೋವಿಂದಪ್ಪ ಶಾಸಕರು ಹೊಸದುರ್ಗ**

## ಫಾಸ್ಟ್ ನ್ಯೂಸ್

### ಲೋಕಸಭಾ ಚುನಾವಣೆ: 4ನೇ ದಿನ, 6 ನಾಮಪತ್ರ

» ದಾವಣಗೆರೆ

ದಾವಣಗೆರೆ ಲೋಕಸಭಾ ಕ್ಷೇತ್ರಕ್ಕೆ ಮೇ 7 ರಂದು ಮತದಾನ ನಡೆಯಲಿದ್ದು ನಾಮಪತ್ರ ಸಲ್ಲಿಕೆಗೆ ನಾಲ್ಕನೇ ದಿನವಾದ ಏಪ್ರಿಲ್ 17 ರಂದು 6 ಅಭ್ಯರ್ಥಿಗಳಿಂದ 6 ನಾಮಪತ್ರಗಳು ಸಲ್ಲಿಕೆಯಾಗಿವೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ: ವೆಂಕಟೇಶ್ ಎಂ.ವಿ ತಿಳಿಸಿದ್ದಾರೆ. ನಾಮಪತ್ರ ಸಲ್ಲಿಸಿದವರ ವಿವರ; ಕಂಟ್ರಿ ಸಿಟಿಜನ್ ಪಾರ್ಟಿಯಿಂದ ಎ.ಟಿ.ದಾದಾ ಖಲಂದರ್, ನವಭಾರತ ಸೇನಾ ಪಕ್ಷದಿಂದ ಎಂ.ಜಿ.ಶ್ರೀಕಾಂತ್, ಪಕ್ಷೇತರರಾಗಿ ಮೊಹಮದ್ ಅಯಾತ್, ಎಂ.ಟಿ.ಚಂದ್ರಣ್ಣ, ಕೆ.ಸೈಯದ್ ಜಬೀವುಲ್ಲಾ, ಜಿ.ಬಿ.ವಿನಯ್‌ಕುಮಾರ್ ನಾಮಪತ್ರ ಸಲ್ಲಿದ್ದು ಇದುವರೆಗೆ ಒಟ್ಟು 20 ಅಭ್ಯರ್ಥಿಗಳಿಂದ 24 ನಾಮಪತ್ರಗಳು ಸಲ್ಲಿಕೆಯಾಗಿದೆ. ಏ.12 ರಂದು ಐದು ಅಭ್ಯರ್ಥಿಗಳಿಂದ 6 ನಾಮಪತ್ರಗಳು, ಏ.15 ರಂದು 8 ಅಭ್ಯರ್ಥಿಗಳಿಂದ 9 ನಾಮಪತ್ರಗಳು ಹಾಗೂ ಏ.16 ರಂದು 3 ಅಭ್ಯರ್ಥಿಗಳಿಂದ 3 ನಾಮಪತ್ರಗಳು, ಏ.17 ರಂದು 6 ಅಭ್ಯರ್ಥಿಗಳಿಂದ 6 ನಾಮಪತ್ರ ಸಲ್ಲಿಕೆಯಾಗಿವೆ.

### ನೀರಿನ ತೊಟ್ಟಿಯಲ್ಲಿ ಬಿದ್ದು ತಾಯಿ, ಮಗಳು ಸಾವು

» ಚಿತ್ರದುರ್ಗ

ನೀರಿನ ತೊಟ್ಟಿಯಲ್ಲಿ ತಾಯಿ, ಮಗಳು ಬಿದ್ದು ನಿಗೂಢವಾಗಿ ಸಾವನ್ನಪ್ಪಿರುವ ಘಟನೆ ಚಿತ್ರದುರ್ಗದ ತಿಪ್ಪೇರುದ್ರಸ್ವಾಮಿ ಆಶ್ರಮದ ಆವರಣದಲ್ಲಿ ನಿನ್ನೆ ರಾತ್ರಿ ನಡೆದಿದೆ. ಗೀತಾ(42) ಹಾಗೂ ಪ್ರಿಯಾಂಕ(20) ಶವನ್ನಪ್ಪಿರುವ ತಾಯಿ, ಮಗಳು. ಚಿತ್ರದುರ್ಗ ನಗರದ ಕೆಳಗೋಟೆ ಬಡಾವಣೆಯ ಶ್ರೀತಿಪ್ಪೇರುದ್ರಸ್ವಾಮಿ ಆಶ್ರಮದಲ್ಲಿ ಪೂಜಾರಿಯಾಗಿರುವ ಸುರೇಶ್ ಪತ್ನಿ ಗೀತಾ ಹಾಗೂ ಪುತ್ರಿ ಪ್ರೀಯಾಂಕ ಅವರುಗಳು ಆಶ್ರಮದಲ್ಲೇ ವಾಸವಿದ್ದರು. ಆಶ್ರಮದ ಆವರಣದಲ್ಲೇ ಹಿಂಭಾದಗದಲ್ಲಿ ಸಿಮೇಂಟ್ ರಿಂಗಿನಿಂದ ನಿರ್ಮಿಸಿರುವ 3 ಅಡಿ ಆಳದ ಸಣ್ಣ ನೀರಿನ ತೊಟ್ಟಿಯಿದ್ದು, ಅದರಲ್ಲಿ ಮೃತ ವ್ಯಕ್ತಿಗಳು ಇಳಿದರು ಕೂಡ ಮುಳುಗುವುದಿಲ್ಲ. ಇಂತಹ ಸ್ಥಿತಿಯಲ್ಲಿ ಹೇಗೆ ತಾನೇ ಬಿದ್ದು ಸಾವನಪ್ಪಲು ಸಾಧ್ಯ ? ಎಂದು ಪೊಲೀಸರು ಸಂಶಯಪಟ್ಟಿದ್ದಾರೆ. ಆದರೆ ಗೀತಾ ಪತಿ ಸುರೇಶ್ ಮನೆಯಲ್ಲಿ ಯಾರು ಇಲ್ಲದ ವೇಳೆಯಲ್ಲಿ ತಾಯಿ, ಮಗಳು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಹೇಳುತ್ತಿರುವುದಾಗಿ ತಿಳಿದುಬಂದಿದೆ. ಮತ್ತೊಂದೆಡೆ ತಾಯಿ, ಮಗಳು ಸಾವನ್ನಪ್ಪಿರುವ ಸ್ಥಳದ ಪಕ್ಕದಲ್ಲೇ ಡೆತ್ ನೋಟೊಂದು ಸಿಕ್ಕಿದ್ದು, ಆರೋಗ್ಯದಲ್ಲಿ ಸಾಕಷ್ಟು ಏರುಪೇರಾಗುತ್ತಿರುವುದರಿಂದ ನಾನು ಆತ್ಮಹತ್ಯೆಗೆ ಶರಣಾಗುತ್ತಿರುವುದಾಗಿ ತಾಯಿ ಗೀತಾ ಬರೆದಿದ್ದು, ತಾಯಿ ಗೀತಾ ಅವರು ಇಲ್ಲದೆ ನಾನು ಜೀವನ ನಡೆಸಲು ಸಾಧ್ಯ ಆಗುವುದಿಲ್ಲ ಇದರಿಂದ ನಾನು ಆತ್ಮಹತ್ಯೆ ಮಾಡಿಕೊಳ್ಳುತ್ತಿರುವುದಾಗಿ ಮಗಳು ಪ್ರಿಯಾಂಕ ಡೆತ್ ನೋಟ್ ಬರೆದಿರುವ ಪತ್ರವೊಂದು ಪೊಲೀಸರಿಗೆ ಕೈ ಸಿಕ್ಕಿದೆ ಎಂದು ಜಿಲ್ಲಾ ಪೊಲೀಸ್ ರಕ್ಷಣಾಧಿಕಾರಿ ಧರ್ಮೇಂದ್ರ ಕುಮಾರ್ ಮೀನಾ ಸಂಜೆವಾಣಿಗೆ ತಿಳಿಸಿದ್ದು, ಈವರೆಗೆ ಸಾವಿಗೆ ನಿಖರ ಕಾರಣ ತಿಳಿದು ಬಾರದೆ, ಸ್ಥಳ ಪರಿಶೀಲನೆ ವೇಳೆ ಕೆಲವೊಂದು ಸಂಶಯಾಸ್ಪದ ಸಂಗತಿಗಳು ಗೋಚರಿಸುತ್ತಿರುವುದರಿಂದ ತಾಯಿ, ಮಗಳದು ಸಂಶಯಾಸ್ಪದ ಸಾವು ಎಂದು ಬಡಾವಣೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿ ಕೊಂಡಿರುವುದಾಗಿ ತಿಳಿಸಿದ್ದಾರೆ. ಪ್ರಕರಣದಲ್ಲಿ ಪೊಲೀಸ್ ಅಧಿಕಾರಿಗಳ ಸೂಕ್ತ ತನಿಖೆಯ ಬಳಿಕವಷ್ಟೇ ತಾಯಿ, ಮಗಳ ಸಾವಿಗೆ ಕಾರಣ ತಿಳಿಯಲಿದೆ.

### 23 ರಂದು ವೀರಭದ್ರ ದೇವರ ಗುಗ್ಗುಳ

» ಚಿತ್ರದುರ್ಗ

ನಗರದ ನೀಲಕಂಠೇಶ್ವರ ದೇವಾಲಯದ ಆವರಣದಲ್ಲಿ ವೀರಶೈವ ಸಮಾಜದಿಂದ ಏ.23 ರಂದು ವೀರಭದ್ರ ದೇವರ ಗುಗ್ಗುಳ ಮತ್ತು ಅಗ್ನಿಕುಂಡ ಕಾರ್ಯಕ್ರಮ ನಡೆಯಲಿದೆ.

## ಪ್ರಮುಖ ಸುದ್ದಿ

### ಬಿಜೆಪಿ ಅಭ್ಯರ್ಥಿ ಗೋವಿಂದ ಕಾರಜೋಳಗೆ ಶಾಸಕ ಗೋವಿಂದಪ್ಪ ಸವಾಲು

# ತಾಕತ್ತಿದ್ದರೆ, ಅಭಿವೃದ್ಧಿಯಲ್ಲಿ ಚರ್ಚೆ ಮಾಡೋಣ ಬನ್ನಿ

» ಹೊಸದುರ್ಗ

ಶ್ರೀರಾಂಪುರದಲ್ಲಿ ಮೊನ್ನೆ ನಡೆದ ಬಿಜೆಪಿ ಪಕ್ಷದ ಪ್ರಚಾರ ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಬಗ್ಗೆ ಏಕವಚನದಲ್ಲಿ ಮಾತನಾಡಿದ್ದೀರಿ. ಕಾಂಗ್ರೆಸ್ ಪಕ್ಷದ ನಾಯಕರ ಬಗ್ಗೆ ಮಾತನಾಡುವಾಗ ಎಚ್ಚರದಿಂದ ಮಾತನಾಡಿ. ಹಿಂದಿನ ಸರ್ಕಾರದಲ್ಲಿ ಉಪಮುಖ್ಯಮಂತ್ರಿ ಮತ್ತು ಜಲ ಸಂಪನ್ಮೂಲ ಸಚಿವರಾಗಿ ಕೆಲಸ ಮಾಡಿದ್ದೀರಿ. ಚಿತ್ರದುರ್ಗ ಜಿಲ್ಲೆಗೆ ನಿಮ್ಮ ಕೊಡುಗೆ ಏನು? ಬಾಗಲಕೋಟೆಯಿಂದ ಈಗ ಬಂದು ಚಿತ್ರದುರ್ಗ ಜಿಲ್ಲೆ ಅಭಿವೃದ್ಧಿಯಾಗಿಲ್ಲವೆಂದು ಹೇಳುತ್ತಿದ್ದೀರಿ. ಈ ನಿಮ್ಮ ಉದ್ಧಟತನದ ಮಾತುಗಳನ್ನು ನಿಲ್ಲಿಸಿ. ನಿಮಗೆ ತಾಕತ್ತಿದ್ದರೆ, ಅಭಿವೃದ್ಧಿ ವಿಷಯದಲ್ಲಿ ಚರ್ಚೆ ಮಾಡೋಣ ಬನ್ನಿ ಎಂದು ಬಿಜೆಪಿ ಅಭ್ಯರ್ಥಿ ಗೋವಿಂದ ಕಾರಜೋಳಗೆ ಶಾಸಕ ಬಿ.ಜಿ.ಗೋವಿಂದಪ್ಪ ಸವಾಲು ಎಸೆದರು.

ಪಟ್ಟಣದ ಕಾಂಗ್ರೆಸ್ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಗೋವಿಂದ ಕಾರಜೋಳ ಅವರೇ ನೀವೇ ಬೃಹತ್ ನೀರಾವರಿ ಸಚಿವರಾಗಿದ್ದೀರಿ. ಎಷ್ಟು ಬಾರಿ ಭದ್ರ ಮೇಲ್ದಂಡೆ ಕಾಮಗಾರಿಯನ್ನು ವೀಕ್ಷಣೆ ಮಾಡಲು ಬಂದಿದ್ದೀರಿ. 1.5 ಕಿ.ಮೀ ಚಾನೆಲ್ ಕಾಮಗಾರಿ 5 ವರ್ಷ ನಿಂತಿತ್ತು. ಭದ್ರಾ ಮೇಲ್ದಂಡೆ ಯೋಜನೆ ನಿಮ್ಮ ಕಣ್ಣಿಗೆ ಬಿದ್ದಿಲ್ಲವಾ? ಭದ್ರಾ ಮೇಲ್ದಂಡೆ ರಾಷ್ಟ್ರೀಯ ಯೋಜನೆಯಾಗಿದ್ದು, ಇದಕ್ಕೆ ಕೇಂದ್ರ ಸರ್ಕಾರ 5300 ಕೋಟಿ. ರೂ.ನೀಡುವುದಾಗಿ ಬಜೆಟ್ ನಲ್ಲಿ ತಿಳಿಸಿದೆ. ಆದರೂ, ಹಣವನ್ನು ಮಾತ್ರ ಬಿಡುಗಡೆ ಮಾಡಿಲ್ಲ. ಒಟ್ಟು ಭದ್ರಾ ಮೇಲ್ದಂಡೆ ಕಾಮಗಾರಿ ಯೋಜನೆ 23.ಸಾವಿರ ಕೋಟಿ ಆಗಿದೆ. ಇಲ್ಲಿಗೆ ಖರ್ಚು ಮಾಡಿರುವುದು 9.ಸಾವಿರ ಕೋಟಿ ರೂ. ಅದರಲ್ಲಿ ನಮ್ಮ ಕಾಂಗ್ರೆಸ್ ಸರ್ಕಾರ 6.ಸಾವಿರ ಕೋಟಿ ರೂ. ನೀಡಿದ್ದು, ಬಿಜೆಪಿ ಸರ್ಕಾರ 3.ಸಾವಿರ ಕೋಟಿ ನೀಡಿದೆ. ಆದರೆ, ಸಂಪೂರ್ಣ ಹಣ ನಾವೇ ನೀಡಿದ್ದೇವೆಂಬ ಸುಳ್ಳು ಆಪಾದನೆ ಸರಿಯಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ನಿಮ್ಮ ಆಡಳಿತ ವ್ಯವಸ್ಥೆಯಲ್ಲಿ ಭದ್ರಾ ಚಾನಲ್ ಪ್ರಗತಿ ಕಾರ್ಯ ನಿಂತುಹೋಗಿತ್ತು. ಜನರಿಗೆ ಸುಳ್ಳಿನ ಮೇಲೆ ಸುಳ್ಳು ಹೇಳಿ ಜಿಲ್ಲೆಯ ಜನರ ಮತ ಕೇಳಲು ಬಂದಿದ್ದೀರಿ. ನಾಲಿಗೆಯ ಮೇಲೆ ನಿಮಗೆ ಹಿಡಿತವಿರಲಿ. ಜಿಲ್ಲೆಯ ಕಾಂಗ್ರೆಸ್ ಮಂತ್ರಿ ಮತ್ತು ಎಲ್ಲಾ ಶಾಸಕರು ಕೆಲಸ ಮಾಡಿದ್ದೇವೆ. ನಮ್ಮ ಬಳಿ ಎಲ್ಲಾ ದಾಖಲೆಗಳಿವೆ. ಬೇಕಿದ್ದರೆ, ನಿಮಗೆ ದಾಖಲೆಗಳನ್ನು ಕೊಡುತ್ತೇವೆ ಓದಿ, ಮತ ಗಿಟ್ಟಿಸಲು ಕಾಂಗ್ರೆಸ್ ಏನು ಮಾಡಿಲ್ಲ ಅನ್ನೋ ಮಾತುಗಳನ್ನು ಬಿಡಿ. ಹೋದಲ್ಲಿ ಬಂದಲ್ಲೆಲ್ಲ ಬಳ್ಳಾರಿ, ಶಿವಮೊಗ್ಗ, ದಾವಣಗೆರೆ, ತುಮಕೂರು ಜಿಲ್ಲೆಗಳು ಅಭಿವೃದ್ಧಿಯಾಗಿವೆ. ಚಿತ್ರದುರ್ಗ ಹಾಳಾಗಿದೆ ಎಂಬ ನಿಮ್ಮ ಉದ್ಧಟತನದ ಮಾತುಗಳನ್ನು ಬಿಡಿ ಎಂದು ಎಚ್ಚರಿಸಿದರು.

ಭದ್ರಾ ಮೇಲ್ದಂಡೆ ಯೋಜನೆ ಕಾಮಗಾರಿಯ ಕೆಲಸ ಹಾಳಾಗಿರುವುದು ನಿಮ್ಮಿಂದಲೇ. ನಿಮ್ಮ ಆಡಳಿತ ವ್ಯವಸ್ಥೆಯಲ್ಲಿ ಏನಾಗಿದೆ ಎಂಬುದನ್ನು ದಾಖಲೆ ಸಮೇತವಾಗಿ ಕೊಡುತ್ತೇನೆ. ಇಂತಹ ಅಪಪ್ರಚಾರಗಳನ್ನು ಮಾಡುವುದನ್ನು ಇಂದಿಗೆ ಬಿಟ್ಟುಬಿಡಿ. ಕಳೆದ ಬಾರಿ ಚಿತ್ರದುರ್ಗ ಲೋಕಸಭಾ ಕ್ಷೇತ್ರದಿಂದ ಆಯ್ಕೆಯಾಗಿ ಕೇಂದ್ರ ಸಚಿವರಾಗಿದ್ದ ನಾರಾಯಣಸ್ವಾಮಿ ಏನು ಕೆಲಸ ಮಾಡಿಲ್ಲ.

ಪುಟ ↘ 2



> ನಮ್ಮ ಪಕ್ಷದ ಅಭ್ಯರ್ಥಿ ಬಿ.ಎನ್. ಚಂದ್ರಪ್ಪ 4ನೇ ತಾರೀಕಿನಂದು ನಾಮಪತ್ರ ಸಲ್ಲಿಕೆ ಮಾಡಿದ್ದು, ನಾಮಪತ್ರ ಸಲ್ಲಿಕೆಯ ಸಂದರ್ಭದಲ್ಲಿ ಉಪಸ್ಥಿತರಿದ್ದ ಸಿಎಂ ಸಿದ್ದರಾಮಯ್ಯನವರು ಕಳೆದ ವಿಧಾನಸಭಾ ಚುನಾವಣೆಗಿಂತ ಈ ಚುನಾವಣೆಯಲ್ಲಿ ಹೆಚ್ಚು ಮತಗಳನ್ನು ಪಕ್ಷದ ಅಭ್ಯರ್ಥಿಗೆ ಹಾಕಿಸಬೇಕೆಂದು ಹೇಳಿದ್ದರು. ಅವರ ಆದೇಶದಂತೆ ಹಳ್ಳಿ ಹಳ್ಳಿಗೂ ಭೇಟಿ ನೀಡಿ ಪಕ್ಷದ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರೊಂದಿಗೆ ಪ್ರಚಾರ ಮಾಡುತ್ತಿದ್ದೇನೆ. ಜನರ ಸ್ಪಂದನೆ ಉತ್ತಮವಾಗಿದ್ದು, ಕಾಂಗ್ರೆಸ್ ಪಕ್ಷದಪರ ಜನರ ಒಲವಿದೆ. ಕೇಂದ್ರದ ಗ್ಯಾರಂಟಿ ಹಾಗೂ ರಾಜ್ಯದ ಗ್ಯಾರಂಟಿ ಯೋಜನೆಗಳ ಉಪಯೋಗಗಳನ್ನು ಜನರಿಗೆ ಒಗ್ಗೂಡಿಸಿ, ಪಕ್ಷದ ಸಾಧನೆಯ ಬಗ್ಗೆ ಹೇಳಿ ಮತ ಕೇಳುತ್ತಿದ್ದೇವೆ.
> » **ಬಿ.ಜಿ. ಗೋವಿಂದಪ್ಪ ಶಾಸಕರು ಮತ್ತು ಅಧ್ಯಕ್ಷರು, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ನಿಗಮ, ಬೆಂಗಳೂರು.**

## ಫಾಸ್ಟ್ ನ್ಯೂಸ್

### ತಾಕತ್ತಿದ್ದರೆ, ಅಭಿವೃದ್ಧಿಯಲ್ಲಿ ಚರ್ಚೆ ಮಾಡೋಣ ಬನ್ನಿ

» ಮೊದಲ ಪುಟದಿಂದ

ಚಿತ್ರದುರ್ಗ ಜಿಲ್ಲೆಯ ಕಾಂಗ್ರೆಸ್ ಪಕ್ಷದ ಎಲ್ಲಾ ಶಾಸಕರು ಅಭಿವೃದ್ಧಿಗಾಗಿ ಒಗ್ಗಟ್ಟಿನಿಂದ ಕೆಲಸ ಮಾಡುತ್ತಿದ್ದೇವೆ. ಈಗಿನ ಜಲಸಂಪನ್ಮೂಲ ಸಚಿವರಾಗಿರುವ ಡಿ.ಕೆ.ಶಿವಕುಮಾರ್ ರವರು ಬಂದು ರಾತ್ರಿ 8ಗಂಟೆವರೆಗೆ ಕರೆ ಮಾಡಿದ್ದರು. ನೀವು ಯಾವತ್ತಾದರೂ ಈ ಬಗ್ಗೆ ಸಭೆ ಮಾಡಿದ್ದೀರಾ? ನಿಮ್ಮ ಪಕ್ಷದ 25 ಲೋಕಸಭಾ ಸದಸ್ಯರು ರಾಜ್ಯದಿಂದ ಆಯ್ಕೆಯಾಗಿ ಹೋಗಿದ್ದರು. ಒಂದು ದಿನವೂ ಕೂಡ ರೈತರ ಸಮಸ್ಯೆ ಮತ್ತು ಅಭಿವೃದ್ಧಿಯ ಬಗ್ಗೆ ಪ್ರಧಾನ ಮಂತ್ರಿ ಹಾಗೂ ಸಂಸತ್ತಿನಲ್ಲಿ ಮಾತನಾಡಿಲ್ಲ. ಈಗ ಚುನಾವಣೆ ಸಮಯದಲ್ಲಿ ಅಭಿವೃದ್ಧಿಯ ಬಗ್ಗೆ ಮಾತನಾಡುವ ನೈತಿಕತೆ ನಿಮಗಿಲ್ಲ. ಜಿಲ್ಲೆಯ ಜನರು ನಿಮಗೆ ಅವಕಾಶ ಕಲ್ಪಿಸಿದರೆ, ಒಳ್ಳೆಯ ಕೆಲಸ ಮಾಡಿ ತೋರಿಸಿ ಎಂದರು. ಈ ವೇಳೆ ಸುದ್ದಿಗೋಷ್ಠಿಯಲ್ಲಿ ಹೊಸದುರ್ಗ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಪದ್ಮನಾಭ್, ಪ್ರಚಾರ ಸಮಿತಿ ಅಧ್ಯಕ್ಷ ರಾಜಣ್ಣ, ಕೆಪಿಸಿಸಿ ಸದಸ್ಯರಾದ ಎಂ.ಪಿ. ಶಂಕರ್, ಅಲ್ತಾಫ್ ಪಾಷಾ, ನಗರ ಘಟಕದ ಅಧ್ಯಕ್ಷ ಆಗ್ರೋ ಶಿವಣ್ಣ, ಮಹಿಳಾ ಘಟಕದ ಅಧ್ಯಕ್ಷೆ ದೀಪಿಕಾ ಸತೀಶ್, ಜವಳ ನಿಗಮದ ಮಾಜಿ ಅಧ್ಯಕ್ಷ ಗೋ ತಿಪ್ಪೇಶ್, ಮುಖಂಡರಾದ ಕಾರೇಹಳ್ಳಿ ಬಸವರಾಜ್, ಕೆ.ಸಿ.ನಿಂಗಪ್ಪ ಮತ್ತು ಕೆಂಚಪ್ಪ ಸೇರಿದಂತೆ ಇತರರಿದ್ದರು.

### ವದ್ದೀಕೆರೆ ಸಿದ್ದೇಶ್ವರಸ್ವಾಮಿ ಜಾತ್ರಾ ಮಹೋತ್ಸವ: ಏ.22ರಂದು ಬ್ರಹ್ಮ ರಥೋತ್ಸವ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕು ಐಮಂಗಲ ಹೋಬಳಿಯ ವದ್ದೀಕೆರೆ ಗ್ರಾಮದ ಶ್ರೀ ಕಾಲಭೈರವೇಶ್ವರಸ್ವಾಮಿ ಯಾನೆ ಶ್ರೀ ಸಿದ್ದೇಶ್ವರಸ್ವಾಮಿ ಜಾತ್ರಾ ಮಹೋತ್ಸವ ಇದೇ ಏಪ್ರಿಲ್ 19 ರಿಂದ 24 ರವರೆಗೆ ನಡೆಯಲಿದ್ದು, ಏ.22ರಂದು ಬ್ರಹ್ಮ ರಥೋತ್ಸವ ನಡೆಯಲಿದೆ. ಶ್ರೀ ಸಿದ್ದೇಶ್ವರಸ್ವಾಮಿ ಜಾತ್ರಾ ಮಹೋತ್ಸವ ಅಂಗವಾಗಿ ಏ.19ರಂದು ರಾತ್ರಿ 8 ಗಂಟೆಗೆ ಕಂಕಣಧಾರಣೆ, ಏ.20ರಂದು ರಾತ್ರಿ 7 ಗಂಟೆಗೆ ಅಗ್ನಿಕುಂಡ, ಏ. 21ರಂದು ರಾತ್ರಿ 8 ಗಂಟೆಗೆ ಚಿಕ್ಕ ರಥೋತ್ಸವ ಕಾರ್ಯ ಜರುಗಲಿದೆ. ಏ. 22ರಂದು ಮಧ್ಯಾಹ್ನ 3.30ಕ್ಕೆ ಹೂವಿನ ಅಡ್ಡಪಲ್ಲಕ್ಕಿ ಉತ್ಸವ ಹಾಗೂ ಜಾನಪದ ಕಲಾವಿದರಿಂದ ವೈವಿಧ್ಯಮಯ ಮೆರವಣಿಗೆ ನಡೆಯಲಿದ್ದು, ಅದೇ ದಿನ ಸಂಜೆ 4.30ಕ್ಕೆ ಬ್ರಹ್ಮ ರಥೋತ್ಸವ ಜರುಗಲಿದೆ.ಏ.23ರಂದು ಉಂಡೆ, ಮಂಡೆ, ಸಿದ್ಧಭುಕ್ತಿ ಕಾರ್ಯ ಹಾಗೂ ಏ.24 ರಂದು ಕಿರುಬಾನ, ವಸಂತೋತ್ಸವ ಮತ್ತು ಸಂಜೆ 6ಕ್ಕೆ ಕಂಕಣ ವಿಸರ್ಜನೆ ಕಾರ್ಯ ನಡೆಯಲಿದೆ ಎಂದು ಹಿರಿಯೂರು ತಹಶೀಲ್ದಾರ್ ಸಿ.ರಾಜೇಶ್ ಕುಮಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವಿಶ್ವ ಪರಿಸರ ದಿನಾಚರಣೆ: ವಿದ್ಯಾರ್ಥಿಗಳಿಗೆ ಸ್ಪರ್ಧೆ

» ಚಿತ್ರದುರ್ಗ

ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ವತಿಯಿಂದ ವಿಶ್ವ ಪರಿಸರ ದಿನಾಚರಣೆ–2024ರ ಅಂಗವಾಗಿ ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆ (1000 ಪದಗಳಿಗೆ ಮೀರದಂತೆ) ಹಾಗೂ ಪದವಿ ವಿದ್ಯಾರ್ಥಿಗಳಿಗೆ ರಸ ಪ್ರಶ್ನೆ ಸ್ಪರ್ಧೆ ಆಯೋಜಿಸಲಾಗಿದೆ. "ಭೂಮಿ ಮತ್ತು ಮಣ್ಣಿನ ಮೇಲೆ ಹವಾಮಾನ ಬದಲಾವಣೆಯ ಪರಿಣಾಮಗಳು" (Impacts of Climate Change on Soil and Land) ಎಂಬ ಶೀರ್ಷಿಕೆಯಡಿಯಲ್ಲಿ ಸ್ಪರ್ಧೆ ನಡೆಸಲಾಗುತ್ತಿದ್ದು, ಪ್ರಬಂಧಗಳನ್ನು ಕಳುಹಿಸಲು ಮೇ 27 ಕೊನೆಯ ದಿನವಾಗಿದೆ. ರಸಪ್ರಶ್ನೆ ಸ್ಪರ್ಧೆಗೆ (ಇಬ್ಬರ ವಿದ್ಯಾರ್ಥಿಗಳ ಟೀಂ) ಭಾಗವಹಿಸಲು ಬಯಸುವ ವಿದ್ಯಾರ್ಥಿಗಳು ಮೇ 27ರೊಳಗೆ ಅಕಾಡೆಮಿಯ ಇ–ಮೇಲ್ ksta.gok@gmail.com ಮೂಲಕ ನೊಂದಾಯಿಸಿಕೊಳ್ಳಬಹುದು. ರಸಪ್ರಶ್ನೆ ಸ್ಪರ್ಧೆಯನ್ನು ಜೂನ್ 6ರಂದು ಅಕಾಡೆಮಿಯ ಸಭಾಂಗಣದಲ್ಲಿ ನಡೆಸಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಅಕಾಡೆಮಿಯ ವೆಬ್‌ಸೈಟ್ https://kstacademy.in ವೀಕ್ಷಿಸಬಹುದು ಅಥವಾ ಅಕಾಡೆಮಿಯ ಹಿರಿಯ ವೈಜ್ಞಾನಿಕಾಧಿಕಾರಿ ಡಾ.ಆರ್.ಆನಂದ್ ದೂರವಾಣಿ ಸಂಖ್ಯೆ 9880405181 ಗೆ ಸಂಪರ್ಕಿಸಬಹುದು ಎಂದು ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎ.ಎಂ. ರಮೇಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಏಪ್ರಿಲ್ 18 ರಂದು ಬೈಕ್ ರ್‍ಯಾಲಿ ಮೂಲಕ ಮತದಾನ ಜಾಗೃತಿ

» ದಾವಣಗೆರೆ

ತಾಪಂ ವತಿಯಿಂದ ಏ18 ರಂದು ಬೆಳಿಗ್ಗೆ 9 ಗಂಟೆಗೆ ಜಿಪಂನಿಂದ ಬೈಕ್ ರ್‍ಯಾಲಿ ಮೂಲಕ ಮತದಾನ ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಜಾಥಾವು ಜಿಲ್ಲಾ ಪಂಚಾಯತ್‌ನಿಂದ ಪ್ರಾರಂಭಿಸಿ ಶಿರಮಾಗೊಂಡನಹಳ್ಳಿ, ಹದಡಿ, ಕೈದಾಳೆ, ಗೋಪನಾಳು, ಅತ್ತಿಗೆರೆ, ಕುರ್ಕಿ ಮತ್ತು ತೋಳಹುಣಸೆ ಮಾರ್ಗವಾಗಿ ಸಂಚರಿಸಿ ಜಿಲ್ಲಾ ಪಂಚಾಯತ್ ಕಚೇರಿಗೆ ಹಿಂತಿರುಗಿ ಮುಕ್ತಾಯಗೊಳಿಸಲಾಗುವುದು.

---

ಭೋವಿ ವಿದ್ಯಾರ್ಥಿ ನಿಲಯದ ಆವರಣದಲ್ಲಿ ರಾಮನವಮಿ – ಹಿಂದುಳಿದ ದಲಿತ ಮಠಾಧೀಶರು ಭಾಗಿ

# ಸದ್ಗುಣ ಅರಿತು ರಾಮನ ಹಾದಿಯಲ್ಲಿ ಸಾಗೋಣ

» ಚಿತ್ರದುರ್ಗ

ನಮ್ಮಲ್ಲಿನ ಗುಣಗಳನ್ನು ಪರಿವರ್ತನೆಗೊಳಿಸಿಕೊಂಡಾಗ ಮಾತ್ರ ನಾವು ರಾಮನಾಗಲೂ ಸಾಧ್ಯ. ನಮ್ಮಲ್ಲಿನ ಕೆಟ್ಟ ಗುಣಗಳನ್ನು ನಾಶಮಾಡಿ ಉತ್ತಮ ಗುಣಗಳನ್ನು ಅಳವಡಿಸಿಕೊಂಡರೆ ನಾವು ಕೂಡ ರಾಮನ ಸ್ವಭಾವವನ್ನು ಹೊಂದಬಹುದು ಎಂದು ಭೋವಿ ಗುರುಪೀಠದ ಶ್ರೀ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿ ತಿಳಿಸಿದರು.





ನಗರದ ಭೋವಿ ವಿದ್ಯಾರ್ಥಿನಿಲಯದ ಆವರಣದಲ್ಲಿರುವ ರಾಮ ಮಂದಿರದಲ್ಲಿ ಬುಧವಾರ ಹಮ್ಮಿಕೊಂಡಿದ್ದ ರಾಮನವಮಿ ಸಮಾರಂಭದಲ್ಲಿ ಹಿಂದುಳಿದ ದಲಿತ ಮಠಾಧೀಶರು ಭಾಗವಹಿಸಿದ್ದು ಇದರಲ್ಲಿ ಇಮ್ಮಡಿಸಿದ್ಧರಾಮೇಶ್ವರಸ್ವಾಮೀಜಿಮಾತನಾಡಿದರು. ಈ ಯುಗವು 'ಪರಿವರ್ತನೆಯ ಯುಗ'. ಎಲ್ಲರಲ್ಲೂ ರಾಮನಂತಹ ಗುಣವಿದೆ, ಎಲ್ಲರಲ್ಲೂ ರಾವಣನಂತಹ ಗುಣವಿದೆ. ನಮ್ಮಲ್ಲಿನ ಗುಣಗಳನ್ನು ಪರಿವರ್ತನೆಗೊಳಿಸಿಕೊಂಡಾಗ ಮಾತ್ರ ನಾವು ರಾಮನಾಗಲೂ ಸಾಧ್ಯ. ನಮ್ಮಲ್ಲಿನ ಕೆಟ್ಟ ಗುಣಗಳನ್ನು ನಾಶಮಾಡಿ ಉತ್ತಮ ಗುಣಗಳನ್ನು ಅಳವಡಿಸಿಕೊಂಡರೆ ನಾವು ಕೂಡ ರಾಮನ ಸ್ವಭಾವವನ್ನು ಹೊಂದಬಹುದು. ಬದಲಾಗಿ, ದುಶ್ಚಟಗಳನ್ನೇ ರೂಢಿಸಿಕೊಂಡರೆ ರಾವಣನಂತೆ ಸ್ವಭಾವವನ್ನು ಹೊಂದಬೇಕಾಗುತ್ತದೆ. ಇಂದಿನಿಂದಲೇ ನಾವು ನಮ್ಮ ಸ್ವಭಾವವನ್ನು ಬದಲಾಯಿಸಿಕೊಳ್ಳೋಣ. ಎಲ್ಲರೂ ಸಭ್ಯರೇ, ಎಲ್ಲರಲ್ಲೂ ಸದ್ಗುಣಗಳಿವೆ, ಅವುಗಳನ್ನು ಅರಿತು, ರೂಢಿಸಿಕೊಂಡು ಮುಂದೆ ಸಾಗೋಣ ಎಂದು ತಿಳಿಸಿದರು. ಕುಂಚಿಟಿಗ ಗುರುಪೀಠದ ಶ್ರೀ ಶಾಂತವೀರ ಸ್ವಾಮೀಜಿ ಮಾತನಾಡಿ, ರಾಮ ಭಾರತದ ನಂಬಿಕೆ, ರಾಮ ಭಾರತದ ಆಧಾರ, ರಾಮ ಭಾರತದ ಕಲ್ಪನೆ, ರಾಮ ಭಾರತದ ಕಾನೂನು, ರಾಮ ಭಾರತದ ಚೇತನ, ರಾಮ ಭಾರತದ ಚಿಂತನೆ, ರಾಮ ಭಾರತದ ಪ್ರತಿಷ್ಠೆ, ರಾಮ ಭಾರತದ ಕೀರ್ತಿ, ರಾಮ ಪ್ರಭಾವಿ, ರಾಮ ಪರಿಣಾಮಕಾರಿ, ರಾಮನೇ ನಿಷ್ಠೆ , ರಾಮನೇ ನೀತಿ, ರಾಮ ಶಾಶ್ವತ, ರಾಮ ನಿತ್ಯನಿರಂತರ, ರಾಮನೇ ಭವಿಷ್ಯ, ರಾಮ ಸರ್ವವ್ಯಾಪಿ, ರಾಮನೇ ವಿಶ್ವ, ರಾಮನೇ ವಿಶ್ವಾಸ ಎಂದು ಬಣ್ಣಿಸಿದರು.ಮಡಿವಾಳ ಗುರುಪೀಠದ ಶ್ರೀ ಬಸವ ಮಾಚಿದೇವ ಸ್ವಾಮೀಜಿ ಮಾತನಾಡಿ, ರಾಮ ತನ್ನ ಸಂಬಂಧಗಳು, ಆಪ್ತರು, ಪ್ರಜೆಗಳು, ಸ್ನೇಹಿತರು ಹಾಗೂ ವಿರೋಧಿಗಳನ್ನೆಲ್ಲಾ ಧರ್ಮದ ದೃಷ್ಟಿಯಿಂದ ನೋಡುತ್ತಿದ್ದ. ತತ್ವಪ್ರಧಾನವಾಗಿ ನೋಡುವ ದೃಷ್ಟಿಯ ನಿರ್ಲಿಪ್ತತೆ, ರಾಮನಲ್ಲಿ ಕಾಣಬಹುದು. ಹೀಗಾಗಿ ತನ್ನ ಜೀವನದ ಅವಿಭಾಜ್ಯ ಅಂಗವಾಗಿದ್ದ ಸೀತೆ ಹಾಗೂ ಲಕ್ಷ್ಮಣನ ಸಂಬಂಧವನ್ನೂ ಕೂಡ ಧರ್ಮದ ನೆಲೆಯಿಂದ ಕಡಿದುಕೊಂಡನು. ಒಂದು ಆದರ್ಶವನ್ನಿಟ್ಟುಕೊಂಡು ಬಾಳಿದವನು ಶ್ರೀರಾಮ ಎಂದರು.ಹಡಪದ ಗುರುಪೀಠದ ಶ್ರೀ ಅನ್ನದಾನಿ ಭಾರತೀ ಅಪ್ಪಣ್ಣ ಸ್ವಾಮೀಜಿ ಮಾತನಾಡಿ ಪ್ರಜೆಗಳ ವರ್ಣನೆಯಲ್ಲಿ ಚಿತ್ರಿಸಲ್ಪಟ್ಟ ರಾಮನ ಗುಣಗಳು, ಸ್ವಯಂ ರಾಮನಲ್ಲಿಯೇ ಇತ್ತು. ಲೋಕ ಒಂದು ವ್ಯಕ್ತಿತ್ವವನ್ನು ನಿರೀಕ್ಷೆ ಮಾಡುತ್ತಿದ್ದಾಗ, ಆ ಎತ್ತರಕ್ಕೆ ಮುಟ್ಟಬೇಕಾದ ಅನಿವಾರ್ಯತೆಯನ್ನು ನಮಗೆ ನಾವು ಹೇರಿಕೊಳ್ಳಬೇಕಾಗುತ್ತದೆ. ಹೀಗಾಗಿ ರಾಮ, ಆ ಎತ್ತರವನ್ನು ಏರಲು ಬಳಸಿದ್ದು ಧರ್ಮವೆಂಬ ಏಣಿಯನ್ನು, ನೀತಿಯೆಂಬ ದಾರಿಯನ್ನು. ಈ ಹಾದಿಯನ್ನು ಅನುಸರಿಸಿ ಬಂದಿದ್ದರಿಂದ, ಪ್ರಜೆಗಳು ಬಯಸಿದ ರಾಮ ಸಿದ್ಧನಾದ. ಹೀಗಾಗಿ ಯುಗ ಯುಗಗಳಲ್ಲಿ ವಿರಳವಾಗಿ ಕಾಣುವ, ಒಂದು ವಿಶಿಷ್ಟ ವ್ಯಕ್ತಿತ್ವ ರಾಮನಾಗಿ ನಮಗೆ ಕಂಡಿದೆ ಎಂದು ತಿಳಿಸಿದರು.

ಕುಂಬಾರ ಗುರುಪೀಠದ ಶ್ರೀ ಬಸವ ಕುಂಬಾರ ಗುಂಡಯ್ಯ ಸ್ವಾಮೀಜಿ, ಶಿವಶಕ್ತಿ ಗುರುಪೀಠದ ಶ್ರೀ ಬಸವಪ್ರಸಾದ ಸ್ವಾಮೀಜಿ, ಪಾರಮಾರ್ಥಿಕ ಗವಿಮಠದ ಶ್ರೀ ಮಲ್ಲಿಕಾರ್ಜುನ ಸ್ವಾಮೀಜಿ, ಕೊರಟಗೆರೆ ಅನ್ನಪೂರ್ಣೇಶ್ವರಿ ಮಠದ ಶ್ರೀ ಬಸವ ಮಹಾಲಿಂಗ ಸ್ವಾಮೀಜಿ, ಬಸವಕಲ್ಯಾಣದ ಶ್ರೀ ಸತ್ಯಕ್ಕ ತಾಯಿ, ನಗರಸಭೆ ನಾಮನಿರ್ದೇಶಿದ ಸದಸ್ಯ ತಿಮ್ಮಣ್ಣ ಉಪಸ್ಥಿತರಿದ್ದರು.



ಚಿತ್ರದುರ್ಗದ ಭೋವಿ ಗುರುಪೀಠಕ್ಕೆ ಆಗಮಿಸಿದ ಸಚಿವ ಎಸ್.ಎಸ್.ಮಲ್ಲಿಕಾರ್ಜುನ ಅವರನ್ನು ಸ್ವಾಮೀಜಿಗಳು ಆಶೀರ್ವದಿಸಿದರು. ಭೋವಿ ಗುರುಪೀಠದ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿ, ಕುಂಚಿಟಿಗ ಗುರುಪೀಠದ ಶಾಂತವೀರ ಸ್ವಾಮೀಜಿ, ವಾಲ್ಮೀಕಿ ಗುರುಪೀಠದ ವಾಲ್ಮೀಕಿ ಪ್ರಸನ್ನಾನಂದ ಸ್ವಾಮೀಜಿ, ಭಗೀರಥ ಗುರುಪೀಠದ ಪುರುಷೋತ್ತಮಾನಂದಪುರಿ ಸ್ವಾಮೀಜಿ, ಯಾದವ ಗುರುಪೀಠದ ಕೃಷ್ಣ ಯಾದವಾನಂದ ಸ್ವಾಮೀಜಿ, ಮಡಿವಾಳ ಗುರುಪೀಠದ ಬಸವ ಮಾಚಿದೇವ ಸ್ವಾಮೀಜಿ, ಈಡಿಗ ಗುರುಪೀಠದ ರೇಣುಕಾನಂದ ಸ್ವಾಮೀಜಿ, ಹಡಪದ ಗುರುಪೀಠದ ಅನ್ನದಾನಿ ಭಾರತಿ ಅಪ್ಪಣ್ಣ ಸ್ವಾಮೀಜಿ, ಕುಂಬಾರ ಗುರುಪೀಠದ ಬಸವ ಕುಂಬಾರ ಗುಂಡಯ್ಯ ಸ್ವಾಮೀಜಿ, ಶಿವಶಕ್ತಿ ಗುರುಪೀಠದ ಬಸವಪ್ರಸಾದ ಸ್ವಾಮೀಜಿ, ಪಾರಮಾರ್ಥಿಕ ಗವಿಮಠದ ಮಲ್ಲಿಕಾರ್ಜುನ ಸ್ವಾಮೀಜಿ, ಕೊರಟಗೆರೆ ಅನ್ನಪೂರ್ಣೇಶ್ವರಿ ಮಠದ ಬಸವ ಮಹಾಲಿಂಗ ಸ್ವಾಮೀಜಿ, ಬಸವಕಲ್ಯಾಣ ಸತ್ಯಕ್ಕ ತಾಯಿ ಇದ್ದರು.

## ಕಾಂಗ್ರೆಸ್ಸಿಗೆ ಬೆಂಬಲ ವ್ಯಕ್ತಪಡಿಸಿದ ಭೋವಿಸಮಾಜದ ಮುಖಂಡರು



» ಹೊಸದುರ್ಗ

ಲೋಕಸಭೆ ಚುನಾವಣೆಯಲ್ಲಿ ಚಿತ್ರದುರ್ಗ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಅವರಿಗೆ ಹೊಸದುರ್ಗ ತಾಲೂಕಿನ ಭೋವಿ ಸಮಾಜದ ಬಹುತೇಕ ಮುಖಂಡರು ಬೆಂಬಲ ವ್ಯಕ್ತಪಡಿಸಿರುವುದಾಗಿ ಹೊಸದುರ್ಗ ತಾಲೂಕು ಬೋವಿ ಸಮಾಜದ ಅಧ್ಯಕ್ಷ ಕೆ.ಟಿ.ಸುಬ್ಬಬೋವಿ ಹೇಳಿದರು.ಪಟ್ಟಣದ ಕೈಗಾರಿಕಾ ಪ್ರದೇಶದಲ್ಲಿ ಬ್ಲಾಕ್ ಕಾಂಗ್ರೆಸ್ ವತಿಯಿಂದ ಬುಧವಾರ ನಡೆದ ಕಾಂಗ್ರೆಸ್ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಅವರ ಪರ ಪ್ರಚಾರ ಕಾರ್ಯಕ್ರಮದಲ್ಲಿ ಅವರು ಪಾಲ್ಗೊಂಡು ಮಾತನಾಡಿ, ಕಾಂಗ್ರೆಸ್ ಪಕ್ಷಕ್ಕೂ, ಭೋವಿ ಸಮಾಜಕ್ಕೂ ತಾಯಿ–ಮಕ್ಕಳ ಸಂಬಂಧವಿದೆ. ರಾಜಕೀಯದಲ್ಲಿ ಸಣ್ಣ ಪುಟ್ಟ ವ್ಯತ್ಯಾಸಗಳು ಆಗುತ್ತವೆ. ಈ ಹಿಂದೆ ತಪ್ಪಾಗಿರುವುದು ಸಹಜ. ಅದನ್ನು ಸರಿಪಡಿಸಿಕೊಂಡು ಹೋಗಬೇಕು ಎನ್ನುವ ದೃಷ್ಠಿಯಿಂದ ನಾವೆಲ್ಲರೂ ಚರ್ಚೆ ಮಾಡಿದ್ದು, ಹಿಂದುಳಿದ, ದಲಿತ, ಶೋಷಿತ ವರ್ಗಗಳ ಪರವಾಗಿರುವ ಕಾಂಗ್ರೆಸ್ ಪಕ್ಷಕ್ಕೆ ನಾವೆಲ್ಲರೂ ಸಂಪೂರ್ಣವಾಗಿ ಬೆಂಬಲ ನೀಡುತ್ತಿದ್ದೇವೆ. ಒಗ್ಗಟ್ಟಿನಿಂದ ಕಾಂಗ್ರೆಸ್ ಪಕ್ಷದ ಪರವಾಗಿ ಮತ ಚಲಾಯಿಸಲಿದ್ದೇವೆ. ತಾಲೂಕಿನಲ್ಲಿ ಭೋವಿ ಸಮಾಜದವರು ವಾಸವಾಗಿರುವ ಪ್ರತಿಹಟ್ಟಿಗೂ ತೆರಳಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗೆ ಮತ ಹಾಕುವಂತೆ ಅವರಲ್ಲಿ ತಿಳುವಳಿಕೆ ಮೂಡಿಸುತ್ತೇವೆ. ಕಾಂಗ್ರೆಸ್ ಪಕ್ಷ ಬೋವಿ ಸಮಾಜಕ್ಕೆ ಏನೆಲ್ಲಾ ಕೊಡುಗೆ ನೀಡಿದೆ ಎಂಬುದನ್ನು ಜನರಿಗೆ ತಿಳಿಸಲಿದ್ದೇವೆ. ಕಾಂಗ್ರೆಸ್ ಪಕ್ಷದಿಂದ ಮಾತ್ರ ಹಿಂದುಳಿದ ವರ್ಗಗಳ ಅಭಿವೃದ್ಧಿಯಾಗಲು ಸಾಧ್ಯ ಎಂದರು.ತಾಲೂಕಿನ ಅನೇಕ ಬೋವಿ ಸಮಾಜದ ಯುವಕರು, ಮುಖಂಡರು ಶಾಸಕ ಬಿ.ಜಿ.ಗೋವಿಂದಪ್ಪ ಅವರಿಗೆ ಸನ್ಮಾನಿಸಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಅವರಿಗೆ ಬೆಂಬಲ ಸೂಚಿಸಿದರು. ಈ ಸಂದರ್ಭದಲ್ಲಿ ಲಂಕೆ ಹನುಮಂತಪ್ಪ, ಶ್ರೀನಿವಾಸ್, ಗಿರಿಯಾಪುರ ರಾಜಪ್ಪ, ಕನ್ನಗೊಂದಿ ಗಿರೀಶ್, ಯಲ್ಲಾಬೋವಿಹಟ್ಟಿ ಮಂಜಪ್ಪ, ಸಿದ್ದಪ್ಪನಹಟ್ಟಿ ಜಗಣ್ಣ ಸೇರಿ ಭೋವಿಸಮಾಜದ ಹಲವರು ಹಾಜರಿದ್ದರು.

## ರಾಮದೇವರ ಆದರ್ಶ ನಾವೆಲ್ಲರೂ ಪಾಲಿಸೋಣ: ಸಿಪಿಸಿ

» ದಾವಣಗೆರೆ

ಹಿಂದೂಗಳ ಆರಾಧ್ಯದೈವ ಶ್ರೀರಾಮಚಂದ್ರ ದೇವರು ಹುಟ್ಟಿದ ದಿನವಾದ ಕಾರಣ ಇಂದು ದೇಶದೆಲ್ಲೆಡೆ ರಾಮನವಮಿಯನ್ನು ಆಚರಿಸುತ್ತಿದ್ದು, ರಾಮದೇವರ ಆದರ್ಶಗಳನ್ನು ನಾವೆಲ್ಲರೂ ಪಾಲಿಸಬೇಕೆಂದು ಶ್ರೀ ಕನ್ನಿಕಾ ಪರಮೇಶ್ವರಿ ದೇವಸ್ಥಾನ, (ರಿ) ಪಬ್ಲಿಕ್ ರಿಲೀಜಿಯಸ್ ಟ್ರಸ್‌ನ ಅಧ್ಯಕ್ಷ ಸಿ.ಪಿ.ಸತೀಶ್‌ಕುಮಾರ್ ಕರೆ ನೀಡಿದರು.

ನಗರದ ಎಸ್‌ಕೆಪಿ ದೇವಸ್ಥಾನದ ರಸ್ತೆಯಲ್ಲಿನ ಟ್ರಸ್ಟ್‌ನ ವೈಧಿಕ




ಭವನದಲ್ಲಿ ಶ್ರೀರಾಮನವಮಿಯ ಅಂಗವಾಗಿ ಆಯೋಜಿಸಲಾಗಿದ್ದ ಪಾನಕ, ಕೋಸಂಬರಿ ವಿತರಣೆ ಮಾಡಿದ ವೇಳೆ ಮಾತನಾಡಿದರು.

ಹಿಂದೂಗಳ ಸಂಪ್ರದಾಯದಂತೆ ವಿಶ್ವರೂಪಿ ಮಹಾವಿಷ್ಣುದೇವರು ಶ್ರೀರಾಮ ಅವತಾರ ತಾಳಿದ ದಿನವನ್ನು ರಾಮನವಮಿಯಾಗಿ ಆಚರಿಸಲಾಗುತ್ತಿದೆ. ಶ್ರೀ ರಾಮನವಮಿಯುಗಾದಿಯ ಎಂಟು ದಿನಗಳ ನಂತರ ಚೈತ್ರ ಮಾಸದ ಶುಕ್ಲ ಪಕ್ಷದಲ್ಲಿ ಆಚರಿಸಲಾಗುತ್ತದೆ. ದೇವಾಲಯಗಳಿಗೆ ಭೇಟಿ ನೀಡುವ ಮೂಲಕ ತಮ್ಮ ಇಷ್ಟಾರ್ಥಗಳನ್ನು ಭಕ್ತರು ಪೂರೈಸಿಕೊಳ್ಳುತ್ತಾರೆ ಎಂದರು.ಈ ವೇಳೆ ವೈಧಿಕ ಭವನದ ಆಡಳಿತಾಧಿಕಾರಿ ಎಸ್.ಆರ್.ಹುಚ್ಚುರಾಯಪ್ಪ, ವ್ಯವಸ್ಥಾಪಕ ಹೆಚ್.ಎಲ್. ವೆಂಕಟೇಶ್, ಜೆ.ವಿ.ಗೋಪಾಲಕೃಷ್ಣ, ರಾಜೇಂದ್ರಕುಮಾರ್ ಇತರರು ಇದ್ದರು.

---

## ಪ್ರಮುಖ ಸುದ್ದಿ

ಬೈಕ್ ರ್‍ಯಾಲಿಗೆ ಪ್ರಚಾರಕ್ಕೆ ಚಾಲನೆ ನೀಡಿದ ಕಾರ್ಯಾಧ್ಯಕ್ಷ ಹಾಲಸ್ವಾಮಿ

# ಚಂದ್ರಪ್ಪನ ಗೆಲುವಿಗಾಗಿ ಗಣಪತಿಗೆ 101 ತೆಂಗಿನಕಾಯಿ ಅರ್ಪಣೆ

» ನಮ್ಮ ಜನ ಸಮಾಚಾರ

ಹೊಳಲ್ಕೆರೆ : ದೇಶದ ಸ್ವಾತಂತ್ರ □□ಕ್ಕಾಗಿ ಹೋರಾಡಿ ದೇಶವನ್ನು ಸ್ವಾತಂತ್ರ್ಯಕ್ಕಾಗಿ ಮತ್ತು ದೇಶದ ಕಲ್ಯಾಣಕ್ಕೆ ಶ್ರಮಿಸಿದ ಕಾಂಗ್ರೆಸ್ ಪಕ್ಷವನ್ನು ಲೋಕಸಭಾ ಚುನಾವಣೆಯಲ್ಲಿ ಬೆಂಬಲಿಸಬೇಕೆಂದು ಕಾಂಗ್ರೇಸ್ ಪಕ್ಷದ ಜಿಲ್ಲಾ ಕಾರ್ಯಾಧ್ಯಕ್ಷ ಕೆ.ಎಂ.ಹಾಲಸ್ವಾಮಿ ತಿಳಿಸಿದರು.

ಅವರು ಬುಧವಾರ ಪಟ್ಟಣದ ಗಣಪತಿ ಕಲ್ಯಾಣ ಮಂಟಪದಲ್ಲಿ ಪೂಜೆ ಸಲ್ಲಿಸಿ ಕಾಂಗ್ರೆಸ್ ಪಕ್ಷದ ಪರ ಬೈಕ್ ರ್‍ಯಾಲಿಗೆ ಪ್ರಚಾರಕ್ಕೆ ಚಾಲನೆ ನೀಡಿ ಮಾತನಾಡಿದರು.



ದೇಶದ ಅಭವೃದ್ಧಿಗೆ ಕಾಂಗ್ರೆಸ್ ಪಕ್ಷ ನೂರಾರು ಯೋಜನೆ ಜಾರಿಗೆ ತಂದು ಜನರ ಕಲ್ಯಾಣಕ್ಕೆ ಶ್ರಮಿಸಿದೆ. ಬ್ಯಾಂಕ್ ರಾಷ್ಟೀಕರಣ , ಭೂಮಿ ಒಡೆತನದ ಹಕ್ಕು , ಅಣು ಶಕ್ತಿ ಸ್ಥಾಪನೆ ,ವಿಮಾನ ತಯಾರಿಕೆ, ನಿಲ್ದಾಣಗಳು, ರೈಲ್ವೆ ಆಭಿವೃದ್ಧಿ, ರಸ್ತೆಗಳು, ಹಡಗು ಬಂದರು ಅಭಿವೃದ್ಧಿಗೊಳಿಸಿದೆ. ನೂರಾರು ವಿಶ್ವವಿದ್ಯಾನಿಲಯ ಸ್ಥಾಪಿಸಿದೆ. ನೂರಾರು ಕಂಪನಿಗಳನ್ನು ಸ್ಥಾಪಿಸಿದೆ. ಕೃಷಿ ಕ್ಷೇತ್ರಕ್ಕೆ ನೀರಾವರಿ ಯೋಜನೆಗಳು, ವಿದ್ಯುತ್ ಉತ್ಪಾದನೆ ಸೇರಿ ಎಲ್ಲಾ ಕ್ಷೇತ್ರದಲ್ಲಿ ಪ್ರಗತಿ ಸಾಧಿಸಲು ಕಾಂಗ್ರೇಸ್ ಪಕ್ಷ ಅಪಾರ ಕೊಡುಗೆ ನೀಡಿದೆ ಎಂದರು.

ಮಾಜಿ ಪ್ರಧಾನಿ ನೇಹರು ದೂರ ದೃಷ್ಟಿ ಯೋಜನೆಗಳು, ಇಂದಿಗಾಂಧಿ ಬಡವರ ಕಲ್ಯಾಣ ಕಾರ್ಯಕ್ರಮಗಳು, ರಾಜೀವ್ ಗಾಂಧಿ ತಂತ್ರಜ್ಞಾನಕ್ಕೆ ಒತ್ತು ನೀಡಿದ್ದರು ಎಂದರು.

ಕಾಂಗ್ರೆಸ್ ಮುಖಂಡ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಪಿ.ರಘು ಮಾತನಾಡಿ ಮನ್‌ಮೋಹನ್ ಸಿಂಗ್ ಆರ್ಥಿಕ ಕ್ಷೇತ್ರದಲ್ಲಿ ಪ್ರಗತಿ, ಜಿಡಿಪಿ ಪ್ರಗತಿ, ಕೃಷಿ ಸಾಲ ಮನ್ನ, ಉದ್ಯೋಗ ಖಾತರಿ ಯೋಜನೆ, ಮಾಹಿತಿ ಹಕ್ಕು, ಹಲವಾರು ಯೋಜನೆಗಳನ್ನು ಜಾರಿಗೆ ತಂದು ದೇಶವನ್ನು ಕಟ್ಟಿದ್ದಾರೆ. ಇದೆಲ್ಲ ಬಿಜೆಪಿ ಪಕ್ಷಕ್ಕೆ ಗೊತ್ತಿಲ್ಲ ಎಂದರು.

ಸಿಎಂ. ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ನೇತೃತ್ವ ಕಾಂಗ್ರೇಸ್ ಪಕ್ಷದ ಸರಕಾರ 5 ಗ್ಯಾರಂಟಿ ಯೋಜನೆಣಟಿಜಜಜಿಟಿಜಜಗಳಿಂದ ಬರಗಾಲದಲ್ಲಿ ಜನರು ಬದುಕುತ್ತಿದ್ದಾರೆ. ಅನ್ನಭಾಗ್ಯ, ಗೃಹಲಕ್ಷ್ಮಿ, ಉಚಿತ ವಿದ್ಯುತ್, ಉಚಿತ ಬಸ್ ಪ್ರಯಾಣ ಜನರಿಗೆ ಸಾಕಷ್ಟು ಅನುಕೂಲ ಕಲ್ಪಿಸಿದೆ. ಗೃಹಲಕ್ಷ್ಮಿ ಹಣದಿಂದ ಕೋಟ್ಯಾಂತರ ಕುಟುಂಬಗಳು ನೆಮ್ಮದಿಯಿಂದ ಬದುಕು ಕಟ್ಟಿಕೊಂಡಿವೆ. ಇದನ್ನು ಸಹಿಸಲು ಸಾಧ್ಯವಿಲ್ಲದ ಬಿಜೆಪಿ ಅವುಗಳನ್ನು ವಿರುದ್ದ ಅಪಪ್ರಚಾರ ಕೈಗೊಂಡಿದೆ. ಹಾಗಾಗಿ ಕಾಂಗ್ರೇಸ್ ಪಕ್ಷದವನ್ನು ದೇಶದಲ್ಲಿ ಆಧಿಕಾರಕ್ಕೆ ತರಬೇಕು.ದೇಶವನ್ನುಬಲಿಷ್ಠಗೊಳಿಸಬೇಕು. ಈ ನಿಟ್ಟಿನಲ್ಲಿ ಕಾಂಗ್ರೇಸ್ ಪಕ್ಷದ ಅಭ್ಯರ್ಥಿ ಬಿ.ಎನ್.ಚಂದ್ರಪ್ಪ ಇವರಿಗೆ ಮತ ನೀಡಬೇಕೆಂದು ಮನವಿ ಮಾಡಿದರು.

ಮಾಜಿ ಶಾಸಕ ಎ.ವಿ.ಉಮಾಪತಿ, ವಿದ್ಯಾರ್ಥಿ ಘಟಕದ ಅಧ್ಯಕ್ಷ ಕಿರಣ್ ಯಾದವ್, ವಕೀಲರಾದ ಪ್ರಶಾಂತ್, ಚಂದ್ರಕಾಂತ್,ಮಾತನಾಡಿದರು.ಕಾಂಗ್ರೇಸ್ ಪಕ್ಷದ ಸಾವಿರಾರು ಕಾರ್ಯಕರ್ತರು ಬೈಕ್ ರ್‍ಯಾಲಿ ಮೂಲಕ ಪಟ್ಟಣದ ಸೇರಿದಂತೆ ವಿವಿಧ ಹಳ್ಳಿಗಳಲ್ಲಿ ಸಂಚರಿಸಿ ಪಕ್ಷದ ಪರ ಮತ ನೀಡುವಂತೆ ಮನವಿ ಮಾಡಿದರು.

## ಫಾಸ್ಟ್ ನ್ಯೂಸ್

### ಶ್ರೀರಾಮಚಂದ್ರನ ಆದರ್ಶಗಳಲ್ಲಿ ವಿಶೇಷ ಶಕ್ತಿ ಇದೆ: ಡಾ.ಅನಂತರಾಮ್



» **ಚಳ್ಳಕೆರೆ**

ಮರ್ಯಾದಪುರುಷೋತ್ತಮಪ್ರಭುಶ್ರೀರಾಮಚಂದ್ರ ಈ ನಾಡಿನ ಸಂಸ್ಕೃತಿ, ಸಂಸ್ಕಾರದ ಪ್ರತೀಕವಾಗಿದೆ. ಪ್ರತಿಯೊಬ್ಬರೂ ಶ್ರದ್ಧಾ, ಭಕ್ತಿಯಿಂದ ಪೂಜಿಸುವ ಆರಾಧ್ಯ ದೈವವಾಗಿದ್ದಾನೆ. ಈ ಬಾರಿಯ ರಾಮನವಮಿ ಉತ್ಸವ ವಿಶೇಷತೆಯಿಂದ ಕೂಡಿದೆ. ಕಾರಣ, ಪ್ರಭುಶ್ರೀರಾಮಚಂದ್ರನ ಜನ್ಮಭೂಮಿಯಲ್ಲಿ ಬೃಹತ್ ರಾಮಮಂದಿರ ನಿರ್ಮಾಣವಾಗಿದೆ. ನಾವೆಲ್ಲರೂ ಶ್ರೀರಾಮನ ಅನುಗ್ರಹವನ್ನು ಸಂಪಾದಿಸಿ ನೆಮ್ಮದಿಯ ಜೀವನದತ್ತ ಮುನ್ನಡೆಯೋಣವೆಂದು ಖ್ಯಾತಜ್ಯೋತಿಷಿ ಡಾ.ಅನಂತರಾಮ್ ಗೌತಮ್‌ತಿಳಿಸಿದರು. ಅವರು, ಬುಧವಾರ ಕರೇಕಲ್ ಶ್ರೀಆಂಜನೇಯಸ್ವಾಮಿ ದೇವಸ್ಥಾನದಲ್ಲಿ ಹಮ್ಮಿಕೊಂಡಿದ್ದಶ್ರೀರಾಮನವಮಿಕಾರ್ಯಕ್ರಮದಲ್ಲಿ ಭಾಗವಹಿಸಿ ಪ್ರಭು ಶ್ರೀರಾಮಚಂದ್ರನ ಜೀವನ ಮೌಲ್ಯ ಕುರಿತು ಮಾತನಾಡಿದರು. ಪ್ರತಿವರ್ಷವೂ ನಾವೆಲ್ಲರೂ ಶ್ರೀರಾಮನವಮಿ ಆಚರಿಸುವ ಮೂಲಕ ಬದುಕಿನಲ್ಲಿ ಸಾರ್ಥಕತೆಯನ್ನು ಪಡೆಯುತ್ತೇವೆ. ಪ್ರಭುಶ್ರೀರಾಮಚಂದ್ರ ಇಡೀ ಮಾನವ ಕುಲಕ್ಕೆ ಆರಾಧ್ಯ ದೈವ. ಎಂತಹ ಪರಿಸ್ಥಿತಿಯಲ್ಲೂ ಮಾತುತಪ್ಪದೆ ತನ್ನ ತಂದೆಯ ಮಾತಿನಂತೆ ಎಲ್ಲವನ್ನೂ ತ್ಯಜಿಸಿ ಪತ್ನಿಸಹಿತ ಕಾಡಿಗೆ ಹೋದವನು ಶ್ರೀರಾಮಚಂದ್ರ. ಶ್ರೀರಾಮಚಂದ್ರನ ಪ್ರತಿಯೊಂದು ಲೀಲೆಯನ್ನು ವಿವರಣೆ ಮಾಡಲು ಸಮಯವೇ ಸಾಕಾಗದು ಎಂದರು. ವೇದಬ್ರಹ್ಮ ನಾಗಶಯನಗೌತಮ್ ಪೂಜಾ ಕಾರ್ಯಕ್ರಮವನ್ನು ನಡೆಸಿಕೊಟ್ಟರು. ಎಸ್.ವೈ.ಮುರಳಿಕೃಷ್ಣ, ಸಿ.ಎಸ್. ಗೋಪಿನಾಥ,ಪ್ರದೀಪ್‌ಶರ್ಮ,ನರಸಿಂಹಮೂರ್ತಿ, ಪತಂಜಲಿಶರ್ಮ, ಹೇಮಂತ್‌ಗೌತಮ್, ಚಂದ್ರಶೇಖರ್, ಪ್ರಕಾಶ್ ಮುಂತಾದವರು ಪೂಜಾ ಕಾರ್ಯದಲ್ಲಿ ಪಾಲ್ಗೊಂಡಿದ್ದರು.

### ವಿಶ್ವ ಹಿಂದೂಪರಿಷತ್ ವತಿಯಿಂದ ರಾಮನವಮಿ ಆಚರಣೆ



» **ಚಳ್ಳಕೆರೆ**

ಪ್ರತಿವರ್ಷದಂತೆ ಈ ವರ್ಷವೂ ನಗರದ ಎಸ್‌ಆರ್ ಕಾಂಪ್ಲೆಕ್ಸ್ ಮುಂಭಾಗದಲ್ಲಿ ವಿಶ್ವಹಿಂದೂಪರಿಷತ್ ವತಿಯಿಂದ ಮರ್ಯಾದ ಪುರುಷೋತ್ತಮ ಪ್ರಭು ಶ್ರೀರಾಮಚಂದ್ರನ ರಾಮನವಮಿ ಕಾರ್ಯಕ್ರಮವನ್ನು ಭಕ್ತಿ ಶ್ರದ್ಧೆಯಿಂದ ಆಚರಿಸಲಾಯಿತು. ವಿಶ್ವಹಿಂದೂಪರಿಷತ್ ತಾಲ್ಲೂಕು ಅಧ್ಯಕ್ಷ ಡಾ.ಡಿ.ಎನ್.ಮಂಜುನಾಥ ಮಾತನಾಡಿ, ಆಯೋಧ್ಯೆಯಲ್ಲಿ ಶ್ರೀರಾಮ ಮಂದಿರ ನಿರ್ಮಾಣದ ಕನಸನ್ನು ನನಸು ಮಾಡುವಲ್ಲಿ ಕೇಂದ್ರ ಸರ್ಕಾರ ಯಶಸ್ವಿಯಾಗಿದೆ. ಐನ್ನೂರು ವರ್ಷಗಳ ಹೋರಾಟದ ನಂತರ ರಾಮನ ಜನ್ಮಸ್ಥಾನದಲ್ಲಿ ಮಂದಿರ ನಿರ್ಮಾಣ ಮಾಡುವ ಅವಕಾಶ ದೊರಕಿದ್ದು ನಮ್ಮೆಲ್ಲರ ಪುಣ್ಯ. ನಾವೆಲ್ಲರೂ ಶ್ರೀರಾಮಚಂದ್ರನ ಆದರ್ಶಗಳನ್ನು ಮೈಗೂಡಿಸಿಕೊಂಡು ನಡೆದರೆ ಮಾತ್ರ ನಮ್ಮ ಬದುಕು ಸಾರ್ಥಕವಾಗುತ್ತದೆ. ಕೇವಲ ಭಾರತದಲ್ಲಿಷ್ಟೆಯಲ್ಲಾ ಇಡೀ ವಿಶ್ವದಲ್ಲೇ ಇಂದು ರಾಮನ ಸ್ಮರಣೆ ನಡೆಯುತ್ತಿದೆ ಎಂದರು. ವಿಶ್ವಹಿಂದೂಪರಿಷತ್‌ನ ವಿಭಾಗೀಯ ಕಾರ್ಯದರ್ಶಿ ಲಕ್ಷ್ಮಿಶ್ರೀವತ್ಸ, ಮಧುಮತಿ, ಕೆ.ಎಂ.ಯತೀಶ್, ಬಾಲಕೃಷ್ಣ, ಮಲ್ಲಿಕಾರ್ಜುನ್‌ಶ್ರೀವತ್ಸ, ಉಮೇಶ್, ಮಹಂತೇಶ್, ಸಿದ್ದೇಶ್, ಭರತ್, ದರ್ಶನ, ಶ್ರೀಧರ, ನಾಗೇಶ್, ತರುಣ್ ಮುಂತಾದವರು ಪೂಜಾ ಕಾರ್ಯದಲ್ಲಿ ಭಾಗವಹಿಸಿದ್ದರು. ಸುಮಾರು ಎರಡು ಸಾವಿರಕ್ಕೂ ಹೆಚ್ಚು ಜನರು ಶ್ರೀರಾಮನಿಗೆ ನಮಿಸಿ ಪಾನಕ, ಕೋಸಂಬರಿ ಪ್ರಸಾದವನ್ನು ಪಡೆದರು.

### ರಾಮನವಮಿ ವಿಶೇಷ ಪೂಜಾ ಹಾಗೂ ಪಾನಕ ವಿತರಣಾ ಕಾರ್ಯಕ್ರಮ

» **ಹೊಸದುರ್ಗ**

ಶ್ರೀ ರಾಮನನ್ನು ಪ್ರತಿಯೊಬ್ಬರೂ ಸಹಾ ಆರಾಧಿಸುತ್ತಾರೆ, ಪ್ರತಿಯೊಬ್ಬರೂ ಸಹಾ ಶ್ರೀ ರಾಮನವಮಿ ಆಚರಣೆಯ ಆಧ್ಯಾತ್ಮಿಕ ಮಹತ್ವವನ್ನ ತಿಳಿಯಬೇಕು ರಾಮನವಮಿ ಎಂಬುದು ಒಂದು ಹಿಂದೂ ಹಬ್ಬವಾಗಿದೆ ಎಂದು ಸ್ವಾಮಿ ವಿವೇಕಾನಂದ ಸೇವಾ ಬಳಗದ ಮುಖ್ಯಸ್ಥ ಹಾಗೂ ಸಮಾಜ ಸೇವಕ ರಾಗಿಕುಮಾರಸ್ವಾಮಿ ತಿಳಿಸಿದರು. ಪಟ್ಟಣದಲ್ಲಿ ಸ್ವಾಮಿ ವಿವೇಕಾನಂದ ಸೇವಾ ಬಳಗದವರು ಪ್ರತಿ ವರ್ಷದಂತೆ ಈ ವರ್ಷವೂ ಸಹಾ ಬುಧವಾರ ಆಯೋಜಿಸಲಾಗಿದ್ದ ರಾಮನವಮಿ ವಿಶೇಷ ಪೂಜಾ ಕಾರ್ಯಕ್ರಮ ಹಾಗೂ ಪಾನಕ ವಿತರಿಸಲಾಯಿತು.

---

#### ಮಾದಿಗ ಒಳಮೀಸಲಾತಿ ನೀಡಲು ಮಲ್ಲಿಕಾರ್ಜುನಖರ್ಗೆ ಅಡ್ಡಿ: ಮಂದಕೃಷ್ಣಮಾದಿಗ ಆರೋಪ

# ಕಾಂಗ್ರೆಸ್‌ನಿಂದ ಮಾದಿಗ ಸಮುದಾಯ ಶೋಷಣೆ




» **ಚಳ್ಳಕೆರೆ**

ಭವ್ಯಭಾರತದ ಸ್ವಾತಂತ್ರ್ಯೋತ್ಸವದ ಅಮೃತ ಮಹೋತ್ಸವದ ಶುಭಸಂದರ್ಭದಲ್ಲೂ ಸಹ ಶೋಷಿತ, ದಲಿತ ಸಮುದಾಯಗಳು ತಮ್ಮ ಅಸ್ತಿತ್ವಕ್ಕಾಗಿ ಹೋರಾಟ ನಡೆಸುವ ದುಸ್ಥಿತಿ ನಮ್ಮಲ್ಲಿದೆ. ರಾಷ್ಟ್ರವನ್ನು ಬಹುವರ್ಷಗಳ ಕಾಲ ಆಳಿದ ಕಾಂಗ್ರೆಸ್ ಪಕ್ಷ ದಲಿತ ಸಮುದಾಯಕ್ಕೆ ನ್ಯಾಯಯುತವಾಗಿ ನೀಡಬೇಕಾದ ಯಾವುದೇ ಸೌಲಭ್ಯವನ್ನು ನೀಡದೆ ವಂಚಿಸಿದೆ. ವಿಶೇಷವಾಗಿ ಮಾದಿಗ ಒಳಮೀಸಲಾತಿ ನೀಡಲು ಪ್ರಸ್ತುತ ಎಐಸಿಸಿ ಅಧ್ಯಕ್ಷ, ಮಾದಿಗ ಸಮುದಾಯದ ಹಿರಿಯ ಮುಖಂಡ ಮಲ್ಲಿಕಾರ್ಜುನ ಖರ್ಗೆ ಅಡ್ಡಿಯಾಗಿದ್ಧಾರೆಂದು ಮಾದಿಗ ಮೀಸಲಾತಿ ಹೋರಾಟ ಸಮಿತಿ ರಾಷ್ಟ್ರೀಯ ಅಧ್ಯಕ್ಷ ಮಂದಕೃಷ್ಣಮಾದಿಗ ಆರೋಪಿಸಿದರು.

ಅವರು, ಗುರುವಾರ ನಗರದ ವಾಸವಿ ಮಹಲ್‌ನಲ್ಲಿ ದಲಿತ ಸಮುದಾಯಗಳು ಹಮ್ಮಿಕೊಂಡಿದ್ದ ಚುನಾವಣಾ ಜಾಗೃತಿ ಸಮಾವೇಶವನ್ನು ದೀಪಬೆಳಗಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಕಾರ್ಯಕ್ರಮದಲ್ಲಿ ತಾಲ್ಲೂಕಿನ ವಿವಿಧ ಮಾದಿಗ ಸಮುದಾಯದ ಸಂಘಟನೆಗಳ ನೇತಾರರು, ಸಮುದಾಯ ಮುಖಂಡರು ಹಾಗೂ ಬಿಜೆಪಿ ಕಾರ್ಯಕರ್ತರು ಭಾಗವಹಿಸಿದ್ದರು. ತಮ್ಮ ಒಂದು ಗಂಟೆಯ ಸುಧೀರ್ಘ ಭಾಷಣದಲ್ಲಿ ಮಾದಿಗ ಸಮುದಾಯಕ್ಕೆ ಆಗುತ್ತಿರುವ ಅನ್ಯಾಯಗಳ ಪಟ್ಟಿಯನ್ನು ಮಾಡಿದ ಅವರು, ಇತ್ತೀಚೆಗೆ ಹೈದರಾಬಾದ್‌ನಲ್ಲಿ ನಡೆದ ಮಾದಿಗ ಮೀಸಲಾತಿ ಹೋರಾಟ ಸಮಿತಿಗೆ ಆಗಮಿಸಿದ ಭಾರತದ ಪ್ರಧಾನಮಂತ್ರಿ ನರೇಂದ್ರಮೋದಿ ತಮ್ಮ ಭಾಷಣದಲ್ಲಿ ಮಾದಿಗ ಮೀಸಲಾತಿ ಹೋರಾಟ ಸಮಿತಿಯ ಹೋರಾಟದ ಬಗ್ಗೆ ಪ್ರಶಂಸೆ ವ್ಯಕ್ತಪಡಿಸಿದರಲ್ಲದೆ, ಈ ಬಾರಿಯ ಲೋಕಸಭಾ ಚುನಾವಣೆಯ ನಂತರ ಮಾದಿಗ ಒಳಮೀಸಲಾತಿ ಜಾರಿಗೆ ತರುವ ಭರವಸೆ ನೀಡಿದ್ದಾರೆ.

ದೇಶದ ಇತಿಹಾಸದಲ್ಲಿ ಪ್ರಧಾನಮಂತ್ರಿಗಳು ನಮ್ಮ ಕಾರ್ಯಕ್ರಮಕ್ಕೆ ಆಗಮಿಸಿ ನಮ್ಮ ಭೇಡಿಕೆ ಬಗ್ಗೆ ಮಾಹಿತಿ ಪಡೆದು ನಾನು ಕಾರ್ಯಕ್ರಮದಲ್ಲಿ ವಿಷಯ ಪ್ರಸ್ತಾಪ ಮಾಡುವ ಮುನ್ನವೇ ನನಗೆ ಈ ಭರಸೆ ನೀಡಿದರು. ಆದ್ದರಿಂದ ನಾನು ಮೋದಿಯವರ ಆಡಳಿತವನ್ನು ಮುಕ್ತಕಂಠದಿಂಧ ಪ್ರಶಸ್ತಿಸುತ್ತೇನೆ. ನನ್ನ ಸಮುದಾಯ ಮೋದಿಯವರನ್ನು ಮೂರನೇಬಾರಿಗೆ ಪ್ರಧಾನಿಯಾಗಲು ಮತದಾನದ ಮೂಲಕ ಬೆಂಬಲಿಸುವಂತೆ ಮನವಿ ಮಾಡುತ್ತೇನೆಂದರು.

ಈ ಹಿಂದೆ ರಾಜ್ಯದಲ್ಲಿ ಮಾಜಿ ಮುಖ್ಯಮಂತ್ರಿ ಬಸವರಾಜಬೊಮ್ಮಾಯಿ ಸರ್ಕಾರದಲ್ಲಿ ನಮ್ಮ ಜನಾಂಗಕ್ಕೆ ಅವಶ್ಯವಿರುವ ಒಳಮೀಸಲಾತಿ ಬಗ್ಗೆ ಮನವಿ ಮಾಡಿದಾಗ ತಡಮಾಡದೆ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪನವರೊಂದಿಗೆ ಚರ್ಚಿಸಿ ಸಚಿವ ಸಂಪುಟದಲ್ಲಿ ಅನುಮೋದಿಸಿ ಕೇಂದ್ರ ಸರ್ಕಾರಕ್ಕೆ ಒಳಮೀಸಲಾತಿ ನೀಡುವಂತೆ ಶಿಫಾರಸ್ಸು ಮಾಡಿದ್ದಾರೆ. ಬಿಜೆಪಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ನಮ್ಮ ನೋವಿನ ಬಗ್ಗೆ ಉದಾರ ಮನೋಭಾವನೆ ಹೊಂದಿದೆ. ಈ ಜನಾಂಗದ ಅಭಿವೃದ್ದಿಯ ಕನಸನ್ನು ನನಸು ಮಾಡಲು ಬಿಜೆಪಿಯಿಂದ ಮಾತ್ರ ಸಾಧ್ಯ. ಚಿತ್ರದುರ್ಗ ಲೋಕಸಭಾ ಕ್ಷೇತ್ರದಲ್ಲಿ ಈ ರಾಜ್ಯದ ಮಾಜಿ ಉಪಮುಖ್ಯಮಂತ್ರಿ ನಮ್ಮ ಜನಾಂಗದ ಹಿರಿಯ ನಾಯಕ ಗೋವಿಂದ ಎಂ.ಕಾರಜೋಳ ಸ್ಪರ್ಧಿಸಿದ್ದು, ಅವರಿಗೆ ಎಲ್ಲರೂ ತಪ್ಪದೆ ತಮ್ಮ ಮತವನ್ನು ನೀಡಿ ಅವರ ಗೆಲುವಿನ ರೂವಾರಿಗಳಾಗಬೇಕು ಎಂದರು.

ಕಾಂಗ್ರೆಸ್ ಪಕ್ಷವೂ ಸೇರಿದಂತೆ ಹಲವಾರು ವಿರೋಧ ಪಕ್ಷಗಳು, ವಿಶೇಷವಾಗಿ ಇಂಡಿಯಾ ಒಕ್ಕೂಟ ಬಿಜೆಪಿ ಮತ್ತು ಪ್ರಧಾನಮಂತ್ರಿಯನ್ನು ಟೀಕಿಸುತ್ತಾ ಬಂದಿವೆ. ಬಿಜೆಪಿ ಪರಿಶಿಷ್ಟ ಜಾತಿ, ಪರಿಶಷ್ಟ ಪಂಗಡ, ಹಿಂದುಳಿದ ವರ್ಗ, ಮುಸ್ಲಿಂ ಸಮುದಾಯದ ವಿರೋಧಿಗಳೆಂದು ಸುಳ್ಳು ಪ್ರಚಾರ ಮಾಡುತ್ತಾರೆ. ಆದರೆ, ಅಬ್ದುಲ್‌ಕಲಾಂರವರನ್ನು ರಾಷ್ಟ್ರಪತಿ ಮಾಡಿದ್ದು ಬಿಜೆಪಿ ದಲಿತ ಸಮುದಾಯದ ಹಿರಿಯ ನೇತಾರ ಕೋವಿಂದ್‌ರವರನ್ನು ರಾಷ್ಟ್ರಪತಿ ಮಾಡಿದ್ದು ಬಿಜೆಪಿ, ಬುಡಕಟ್ಟು ಸಮುದಾಯದ ಮಹಿಳೆಯನ್ನು ರಾಷ್ಟ್ರಪತಿ ಮಾಡಿದ್ದು ಬಿಜೆಪಿ ಈ ದೇಶದ ಅತಿ ಉನ್ನತ್ತ ಸ್ಥಾನಗಳಿಗೆ ಬಿಜೆಪಿ ದಲಿತ, ಬುಡಕಟ್ಟು ಸಮುದಾಯಕ್ಕೆ ನೀಡುವ ಮೂಲಕ ವಿಶ್ವಕ್ಕೆ ಮಾದರಿಯಾಗಿದೆ ಎಂದರು.

ಮೀಸಲಾತಿ ಸಮಿತಿ ರಾಜ್ಯಾಧ್ಯಕ್ಷ ನರಸಪ್ಪಮಾದಿಗ ಮಾತನಾಡಿ, ರಾಜ್ಯದಲ್ಲಿ ಬಿಜೆಪಿ ಅಭ್ಯರ್ಥಿಗಳ ಪರ ನಾನು ಪ್ರಚಾರ ಕಾರ್ಯ ಕೈಗೊಂಡಿದ್ದೇವೆ. ದೇಶದ ಜನತೆಗೆ ಉತ್ತಮ ಆಡಳಿತ ನೀಡಬೇಕು, ದೇಶದ ಸುಭದ್ರತೆಗೆ ದಕ್ಷ ವ್ಯಕ್ತಿಯ ಅವಶ್ಯಕತೆ ಇದೆ, ರಾಷ್ಟ್ರವನ್ನು ಮುನ್ನಡೆಸುವ ಮಹಾನ್ ನಾಯಕವೆಂದರೆ ಅದು ನರೇಂದ್ರಮೋದಿ ಮಾತ್ರ. ಆದ್ದರಿಂದ ನಮ್ಮ ಮೀಸಲಾತಿ ಹೋರಾಟ ಸಮಿತಿ ರಾಜ್ಯದೆಲ್ಲೆಡೆ ಸಂಚರಿಸಿ ಬಿಜೆಪಿ ಅಭ್ಯರ್ಥಿಗಳನ್ನು ಚುನಾವಣೆಗೆ ಬೆಂಬಲಿಸಿ ಗೆಲ್ಲಿಸುವಂತೆ ಸಮುದಾಯಕ್ಕೆ ಮನವಿ ಮಾಡುತ್ತಿದ್ದೇವೆಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಹೊಟ್ಟೆಪ್ಪನಹಳ್ಳಿ ಕಾಂತ್‌ರಾಜ್ ವಹಿಸಿದ್ದರು. ಮಂಡಲಾಧ್ಯಕ್ಷ ಸೂರನಹಳ್ಳಿಶ್ರೀನಿವಾಸ್, ಬಿಜೆಪಿ ಜಿಲ್ಲಾ ಪ್ರಧಾನಕಾರ್ಯದರ್ಶಿ ಬಾಳೆಮಂಡಿರಾಮದಾಸ್, ಮಾಜಿ ಕಾರ್ಯದರ್ಶಿ ಜಯಪಾಲಯ್ಯ, ಪರಜಿತ ಅಭ್ಯರ್ಥಿ ಅನಿಲ್‌ಕುಮಾರ್, ಯುವ ಮುಖಂಡಕೆ.ಟಿ.ಕುಮಾರಸ್ವಾಮಿ,ಜೆಡಿಎಸ್ ಮುಖಂಡ ಎಂ.ರವೀಶ್‌ಕುಮಾರ್, ಅಧ್ಯಕ್ಷ ಪಿ.ತಿಪ್ಪೇಸ್ವಾಮಿ, ಕಾರ್ಯಾಧ್ಯಕ್ಷ ಎಚ್.ಆನಂದಪ್ಪ, ನಗರಸಭಾ ಸದಸ್ಯ ವಿ.ವೈ.ಪ್ರಮೋದ್, ಚನ್ನಿಗರಾಮಯ್ಯ, ಕಲಮರಹಳ್ಳಿಶಿವಣ್ಣ, ಮಾರುತಿ, ಎಂ.ಇಂದ್ರೇಶ್ ಮುಂತಾದವರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

---

## ರಾಷ್ಟ್ರಭಕ್ತ ತರುಣ ಸಂಘಟನೆ ಬಿಜೆಪಿ ಬೆಂಬಲಿಸಿ

#### ಎಸ್ ಸಿ ಮೋರ್ಚಾ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಗೂಳಿಹಟ್ಟಿ ಕೃಷ್ಣಮೂರ್ತಿ ಹೇಳಿಕೆ

» **ಹೊಸದುರ್ಗ**



ದೇಶದ ಹೆಮ್ಮೆಯ ಪ್ರಧಾನಿ ನರೇಂದ್ರ ಮೋದಿಯವರು ಹೆಚ್ಚು ಹೆಚ್ಚು ಯುವಕರನ್ನ ಆಕರ್ಷಿಸುತ್ತಿದ್ದುರಾಷ್ಟ್ರಭಕ್ತತರಣರುಬಿಜೆಪಿಯನ್ನು ದೇಶದಾದ್ಯಂತ ಬೆಂಬಲಿಸುತ್ತಿದ್ದಾರೆ ಎಂದು ಜಿಲ್ಲಾ ಬಿಜೆಪಿ ಎಸ್ಸಿ ಮೋರ್ಚಾ ಪ್ರಧಾನ ಕಾರ್ಯದರ್ಶಿ ಗುಳಿಹಟ್ಟಿ ಕೃಷ್ಣಮೂರ್ತಿ ತಿಳಿಸಿದರು.

ತಾಲೂಕಿನ ಮಾಡದಕೆರೆ ಹೋಬಳಿಯ ದುಗ್ಗಾವರ, ಗೂಳಿಹಟ್ಟಿ ,ಗೂಳಿಹಟ್ಟಿ ಬೋಬಿಹಟ್ಟಿ ,ಮಲ್ಲಾಪುರ, ಶಬರಿ ವನ, ಮಾವಿನಕಟ್ಟೆ ,ಬಿಸನಹಳ್ಳಿ ,ತುಂಬಿನಕೆರೆ, ಗ್ರಾಮಗಳಲ್ಲಿ ಬಿಜೆಪಿ ಅಭ್ಯರ್ಥಿ ಗೋವಿಂದ ಕಾರಜೋಳ ರವರ ಪರವಾಗಿ ಪ್ರಚಾರ ಮಾಡಿ ಮಾತನಾಡಿದ ಅವರು ಇಲ್ಲಿನ ಮಲ್ಲಾಪುರದ ಶಬರಿವನ ಪ್ರಭು ಶ್ರೀ ರಾಮನು ಪದಸ್ಪರ್ಶ ಮಾಡಿ ಪುನೀತವಾದ ಸ್ಥಳ ಈ ಸನ್ನಿಧಿಯಲ್ಲಿ ಪೂಜೆ ಮಾಡಿಸಿ ಬಿಜೆಪಿ ಪರ ಪ್ರಚಾರ ಮಾಡುತ್ತಿದ್ದೇವೆ ಕಳೆದ ಚುನಾವಣೆಯಲ್ಲಿ ಹೊಸದುರ್ಗ ತಾಲೂಕಿನಲ್ಲಿ 29 ಸಾವಿರ ಹೆಚ್ಚಿನ ಬಹುಮತ ನೀಡಿ ಹಿಂದಿನ ಲೋಕಸಭಾ ಸದಸ್ಯರಾದ ಎ ನಾರಾಯಣಸ್ವಾಮಿ ಅವರನ್ನು ಒಂದುವರೆ ಲಕ್ಷಕ್ಕೂ ಅಧಿಕ ಮತಗಳಿಂದ ಆರಿಸಿ ಕಳಿಸಿದ್ದೆವು.ಚಿತ್ರದುರ್ಗ ಲೋಕಸಭಾ ವ್ಯಾಪ್ತಿಯಲ್ಲಿ ನುರಿತ ಅನುಭವಿ ನಾಯಕರು ಮತ್ತು ಕಾರ್ಯಕರ್ತರು ನಮ್ಮ ಅಭ್ಯರ್ಥಿಯ ಪರ ಪ್ರಚಾರ ಮಾಡುತ್ತಿದ್ದಾರೆ. ಈ ಬಾರಿ ಹೆಚ್ಚು ಮತ ಹಾಕುವುದರ ಮೂಲಕ ನಮ್ಮ ಅಭ್ಯರ್ಥಿಯ ಕಾರ್ ಜೋಳ ರವರನ್ನ ದೆಹಲಿಗೆ ದೆಹಲಿಯ ಸಂಸತ್ ಭವನದಲ್ಲಿ ಮೋದಿಯ ಸಂಪುಟದಲ್ಲಿ ಗಂಡು ಮೆಟ್ಟಿನ ನಾಡ ಚಿತ್ರದುರ್ಗದಿಂದ ಆರಿಸಿ ಕಳಿಸಲು ಮೋದಿ ಅಭಿಮಾನಿಗಳು ದೇಶಭಕ್ತರು ಸನ್ನದ್ಧರಾಗಿದ್ದಾರೆ ಎಂದರು.

---

## ಪೌರಕಾರ್ಮಿಕರು ಮತ್ತು ಮಹಿಳಾ ಸ್ವಸಹಾಯ ಸಂಘದ ವತಿಯಿಂದ ಮತದಾನ ಜಾಗೃತಿ ಕಾರ್ಯಕ್ರಮ




» **ಚಳ್ಳಕೆರೆ**

ರಾಷ್ಟ್ರದ ಸಂವಿಧಾನ ಮತದಾನದ ಹಕ್ಕನ್ನು ಪಡೆದ ಪ್ರತಿಯೊಬ್ಬ ಮತದಾರರನು ಚುನಾವಣೆ ಸಂದರ್ಭದಲ್ಲಿ ತಪ್ಪದೆ ತಮ್ಮ ಹಕ್ಕು ಚಲಾಯಿಸುವ ಮೂಲಕ ಮತದಾನದ ಪಾವಿತ್ರತೆಯನ್ನು ಉಳಿಸಬೇಕಿದೆ. ಈ ನಿಟ್ಟಿನಲ್ಲಿ ಮತದಾರರ ಪಟ್ಟಿಯಲ್ಲಿರುವ ಎಲ್ಲಾ ಮತದಾರರು ಏ.26ರಂದು ನಡೆಯುವ ಲೋಕಸಭಾ ಚುನಾವಣೆಯಲ್ಲಿ ಮತಚಲಾಯಿಸಲು ಮರೆಯಬಾರದು ಎಂದು ತಾಲ್ಲೂಕು ಸ್ವೀಪ್ ಸಮಿತಿ ಕಾರ್ಯದರ್ಶಿ, ಪೌರಾಯುಕ್ತ ಜೀವನ್‌ಕಟ್ಟಿಮನಿ ತಿಳಿಸಿದರು.

ಅವರು, ಬುಧವಾರ ತಾಲೂಕು ಪಂಚಾಯಿತಿ ಕಾರ್ಯಾಲಯದ ಮುಂಭಾಗದಿಂದ ಜಿಲ್ಲಾ ಸ್ವೀಪ್ ಸಮಿತಿ ಕಾರ್ಯದರ್ಶಿದಲ್ಲಿ ತಾಲ್ಲೂಕು ಸ್ವೀಪ್ ಸಮಿತಿವತಿಯಿಂದ ಹಮ್ಮಿಕೊಳ್ಳಲಾದ ಮತದಾನ ಜಾಗೃತಿ ಜಾಥ ಮತ್ತು ರಂಗೋಲಿ ಸ್ಪರ್ಧೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಇದೇ ಸಂದರ್ಭದಲ್ಲಿ ತಾಲ್ಲೂಕು ಪಂಚಾಯಿತಿ ಕಚೇರಿ ಮುಂಭಾಗದಲ್ಲಿ ಸ್ವಸಹಾಯ ಮಹಿಳಾ ಸಂಘದ ವತಿಯಿಂದ ರಂಗೋಳಿ ಸ್ಪರ್ಧೆ ಹಮ್ಮಿಕೊಂಡಿದ್ದು ಹಲವಾರು ಮಹಿಳೆಯರು ಸ್ಪರ್ಧೆಯಲ್ಲಿ ಪಾಲ್ಗೊಂಡು ಮತದಾನಕ್ಕೆ ಸಂಬಂಧಪಟ್ಟ ರಂಗೋಲಿಗಳನ್ನು ಚಿತ್ರದ ಮೂಲಕ ಮೂಡಿಸಿದರು. ಮತದಾನ ಜಾಗೃತಿ ಜಾಥ ತಾಲ್ಲೂಕು ಪಂಚಾಯಿತಿ ಕಾರ್ಯಾಲಯದಿಂದ ವಾಲ್ಮೀಕಿ, ಅಂಬೇಡ್ಕರ್ ನೆಹರೂ ವೃತ್ತದ ಮೂಲಕ ತಾಲ್ಲೂಕು ಕಚೇರಿಗೆ ಆಗಮಿಸಿತು. ನಗರಸಭೆಯ ಕಂದಾಯಾಧಿಕಾರಿ ಸತೀಶ್, ಹಿರಿಯ ಆರೋಗ್ಯ ನಿರೀಕ್ಷಕರಾದ ಸುನೀಲ್, ಗಣೇಶ್, ಗೀತಾಕುಮಾರಿ, ಎಲೆಕ್ಟ್ರಿಕಲ್ ಇಂಜಿನಿಯರ್ ಚೇತನ್, ರಾಜೇಶ್, ತಿಪ್ಪೇಸ್ವಾಮಿ, ಎಸ್.ಎಲ್.ಮಂಜಣ್ಣ, ಸುಮಾ ಮುಂತಾದವರು ಭಾಗವಹಿಸಿದ್ದರು.

---

## ಮತದಾರರ ಜಾಗೃತಿಗಾಗಿ ಸಹಿ ಸಂಗ್ರಹ ಅಭಿಯಾನ

» **ಚಿತ್ರದುರ್ಗ**

ಚಿತ್ರದುರ್ಗ ನಗರದ ಒನಕೆ ಓಬವ್ವ ಜಿಲ್ಲಾ ಕ್ರೀಡಾಂಗಣದಲ್ಲಿ ಬುಧವಾರ ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ ವತಿಯಿಂದ ಮತದಾರರ ಜಾಗೃತಿ ಅಂಗವಾಗಿ ಮತದಾರರ ಪ್ರತಿಜ್ಞಾವಿಧಿ ಮತ್ತು ಸಹಿ ಸಂಗ್ರಹ ಅಭಿಯಾನ ನಡೆಯಿತು. ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ ಸೋಮಶೇಖರ್ ಅವರು ಸಹಿ ಸಂಗ್ರಹ ಅಭಿಯಾನಕ್ಕೆ ಸಹಿ ಮಾಡುವುದರ ಮೂಲಕ ಚಾಲನೆ ನೀಡಿದರು. ಇದೇ ವೇಳೆ ನೆರೆದಿದ್ದ ನಾಗರಿಕರಿಗೆ ಮತದಾರರ ಪ್ರತಿಜ್ಞಾ ವಿಧಿ ಬೋಧಿಸಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ತಿಮ್ಮಪ್ಪ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕಿ ಭಾರತಿ ಆರ್.ಬಣಕಾರ್, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಓ.ಪರಮೇಶ್ವರಪ್ಪ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್, ನಗರಸಭೆ ಪೌರಾಯುಕ್ತೆ ಎಂ.ರೇಣುಕಾ ಸೇರಿದಂತೆ ಮತ್ತಿತರು ಉಪಸ್ಥಿತರಿದ್ದರು.



---

**ಪ್ರಮುಖ ಸುದ್ದಿ**

# ಬಿಜೆಪಿಯಿಂದ ಆಡಳಿತ ಯಂತ್ರ ದುರುಪಯೋಗ: ಮಯೂರ್

» **ಚಿತ್ರದುರ್ಗ**



ಆಡಳಿತ ಯಂತ್ರವನ್ನು ದುರುಪಯೋಗ ಮಾಡಿಕೊಂಡು ಸರ್ವಾಧಿಕಾರ ನಡೆಸುತ್ತಿರುವ ಬಿಜೆಪಿ ಸರ್ಕಾರವನ್ನು ಇದೀಗ ಬದಲಾಯಿಸಿ ಕಾಂಗ್ರೆಸ್‌ನ್ನು ಅಧಿಕಾರಕ್ಕೆ ತರಬೇಕಿದೆ ಎಂದು ಎಐಸಿಸಿ ಕಾರ್ಯದರ್ಶಿ ಮಯೂರ್ ಜಯಕುಮಾರ್ ಹೇಳಿದರು.

ನಗರದಲ್ಲಿ ಪತ್ರಿಕಾ ಗೋಷ್ಠಿಯಲ್ಲಿ ಮಾತಾನಾಡಿದ ಅವರು, ರಾಜ್ಯದಲ್ಲಿ ಕೊಟ್ಟ ಮಾತಿನಂತೆ ಕಾಂಗ್ರೆಸ್ ಐದು ಗ್ಯಾರಂಟಿಗಳನ್ನು ನೀಡಿದೆ. ಆದರೆ ಕೇಂದ್ರ ಸರ್ಕಾರ ರಾಜ್ಯ ಸರ್ಕಾರ ಆಡಳಿತ ನಡೆಸಲು, ಸರಿಯಾದ ಕೆಲಸ ಮಾಡಲು ಬಿಡುತ್ತಿಲ್ಲ. ಆದ್ದರಿಂದ ಬದಲಾವಣೆಯ ಸಮಯ ಬಂದಿದೆ. ಚಿತ್ರದುರ್ಗಲೋಕಸಭಾ ಕ್ಷೇತ್ರದ ಅಭ್ಯರ್ಥಿ ಚಂದ್ರಪ್ಪ ಅವರನ್ನು ಗೆಲ್ಲಿಸಬೇಕಿದೆ ಎಂದರು.ಅಭ್ಯರ್ಥಿ ಚಂದ್ರಪ್ಪ ಮಾತಾಡಿ, ಸರ್ವಾಧಿಕಾರ ಮತ್ತು ಸಂವಿಧಾನ ರಕ್ಷಣೆ ನಡುವಿನ ಚುನಾವಣೆ ಇದಾಗಿದೆ. ಮಿತ್ರ ಪಕ್ಷಗಳು ಸಂವಿಧಾನ ರಕ್ಷಣೆ ಮಾಡುವಲ್ಲಿ ನಾವು ಬದ್ದರಾಗಿದ್ದೇವೆ. ಕೇಂದ್ರದ ಮಾಜಿ ಸಚಿವರೊಬ್ಬರು ಪದೇ ಪದೇ ಸಂವಿಧಾನ ಬದಲಾವಣೆ ಬಗ್ಗೆ ಮಾತಾಡಿದೂ, ಅದರ ಬಗ್ಗೆ ಮೋದಿ ಚಕಾರವೆತ್ತಲಿಲ್ಲ. ಯಾವುದೇ ಸ್ಪಷ್ಟತೆಯನ್ನು ಸಂವಿಧಾನದ ಬಗ್ಗೆ ಮಾತಾಡಲಿಲ್ಲ ಎಂದರು.

ಜನರು ಕಂಗಾಲಾಗಿದ್ದಾರೆ. ಮೋದಿ ಅವರು ಯಾವುದೇ ಒಂದು ಕುಟುಂಬಕ್ಕೆ ಸಹಾಯ ಮಾಡಿದ್ದಾರೆಂದು ಬಿಜೆಪಿ ಅಥವ ಕುಮಾರಸ್ವಾಮಿ ಹೇಳಬೇಕು. ಬಿಜೆಪಿ ಜನರ ಭಾವನೆಗಳನ್ನು ಕೆರಳಿಸಿ ಚುನಾವಣೆ ಗೆದ್ದಿದ್ದಾರೆ. ಅವರಿಗೆ ಗೊತ್ತಿದೆ, ಅಭಿವೃದ್ಧಿ ಮಾಡಿ ನಾವು ಗೆಲ್ಲುವುದಿಲ್ಲ ಎಂದು ಗೊತ್ತಿದೆ ನಾವು ಸೋತರೂ, ಅಭಿವೃದ್ಧಿ ಬಗ್ಗೆ ಚಿಂತನೆ ಮಾಡುತ್ತೇವೆ. ಜನತೆ ಆತಂಕದಲ್ಲಿದ್ದಾರೆ. ಜನತೆ ಇಂದು ತೀರ್ಮಾನ ತೆಗೆದುಕೊಳ್ಳುತ್ತಾರೆ. ಇಂದು ದೇಶದಲ್ಲಿ ಆಶ್ಚರ್ಯಕರ ಫಲಿತಾಂಶ ಬರುತ್ತದೆ. ಜಾತ್ಯಾತೀತ ತತ್ವ ಸಂವಿಧಾನದ ರಕ್ಷಣೆಗಾಗಿ ಕಾಂಗ್ರೆಸ್ ಪಕ್ಷಕ್ಕೆ ಮತವನ್ನು ಕೊಡಿ ಎಂದು ಮನವಿ ಮಾಡಿದರು.

ಕಾಂಗ್ರೆಸ್ ಜಿಲ್ಲಾಧ್ಯಕ್ಷ ತಾಜ್‌ಪೀರ್ ಮಾತಾಡಿ, ನೆಮ್ಮದಿಯಿಂದ ದೇಶದ ಜನತೆ ಬದುಕಬೇಕೆಂದು ಇಂದು ಮಿತ್ರ ಪಕ್ಷಗಳೆಲ್ಲಾ ಸೇರಿ ಇಂಡಿಯಾ ಒಕ್ಕೂಟ ಮಾಡಿಕೊಂಡಿದ್ದೇವೆ. ನಾವೂ ಕೂಡ ಎಲ್ಲೆಡೆ ಪ್ರಚಾರ ಮಾಡಿದ್ದು, ಮಿತ್ರ ಪಕ್ಷಗಳು ಕೂಡಾ ಅವರದ್ದೇ ರೀತಿಯಲ್ಲಿ ಪ್ರಚಾರ ಮಾಡುತ್ತಿದ್ದಾರೆ. ದೇಶದಲ್ಲಿ ಒಳ್ಳೆಯ ವಾತಾವರಣ ಮೂಡಬೇಕು ಎಂಬ ಕಾರಣಕ್ಕೆ ಎಲ್ಲರೂ ಒಗ್ಗಟ್ಟಾಗಿ ಚುನಾವಣೆ ಮಾಡುತ್ತಿದ್ದೇವೆ ಎಂದರು.ಇದೇ ಸಮಯದಲ್ಲಿ ಮಾತಾಡಿದ ಆಮ್ ಆದ್ಮಿ ಪಕ್ಷ ಜಿಲ್ಲಾಧ್ಯಕ್ಷ ಜಗದೀಶ್ ಮಾತನಾಡಿ, ಸಂವಿಧಾನ ಬದಲು ಮಾಡುತ್ತೇವೆ ಎಂದು ಹೇಳುತ್ತಿರುವ ಬಿಜೆಪಿ ಅವರನ್ನು ರೈತರು ತಮ್ಮ ಊರುಗಳ ಒಳಗೆ ಬಿಟ್ಟುಕೊಳ್ಳಬೇಡಿ, ಧರ್ಮದ ಹೆಸರು ಹೇಳಿಕೊಂಡು ಚುನಾವಣೆ ಮಾಡುವ ಬಿಜೆಪಿ ಗೆದ್ದರೆ, ಸಂವಿಧಾನವನ್ನು ಧೂಳಿಪಟ ಮಾಡುತ್ತಾರೆ. ಕಾಂಗ್ರೆಸ್ ಇಷ್ಟು ವರ್ಷಗಳು ಆಡಳಿತ ಮಾಡಿದರೂ, ಇಷ್ಟೊಂದು ಹಗರಣ ಭ್ರಷ್ಟಾಚಾರ ನಡೆಸಿರಲಿಲ್ಲ. ಆದರೆ ಬಿಜೆಪಿ ಎಲೆಕ್ಟ್ರೋ ಬಾಂಡ್‌ಗಳ ಹಗರಣ ನಡೆದಿದೆ. ಸಂವಿಧಾನದ ಕಗ್ಗೊಲೆಯಾಗಿದೆ. ನ್ಯಾಯದ ಬಗ್ಗೆ ಮಾತಾಡಿದ ಕೇಜ್ರಿವಾಲ್ ಅವರನ್ನು ಜೈಲಿಗೆ ಕಳುಹಿಸಿದ್ದಾರೆ. ಬಿಜೆಪಿಯನ್ನು ಅಧಿಕಾರಕ್ಕೆ ಬರಲು ಬಿಟ್ಟರೆ ಒಬ್ಬರಿಗೊಬ್ಬರಿಗೆ ಜಗಳವಿಡುತ್ತಾರೆ. ಆದ್ದರಿಂದ ಮಿತ್ರ ಪಕ್ಷಗಳ ಹಾಗೂ ಕಾಂಗ್ರೆಸ್ ಅಭ್ಯರ್ಥಿ ಬಿಎನ್ ಚಂದ್ರಪ್ಪ ಅವರಿಗೆ ಅತೀ ಹೆಚ್ಚು ಮತ ಕೊಟ್ಟು ಗೆಲ್ಲಿಸಬೇಕು ಎಂದು ಮನವಿ ಮಾಡಿದರು. ಕಾಂಗ್ರೆಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ಜೆಜೆ ಹಟ್ಟಿ ತಿಪ್ಪೇಸ್ವಾಮಿ, ಸಮಾಜವಾದಿ ಪಕ್ಷದ ರಾಜ್ಯಾಧ್ಯಕ್ಷ ಮಂಜಪ್ಪ, ಕಮ್ಯೂನಿಸ್ಟ್ ಪಕ್ಷದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸುರೇಶ್ ಬಾಬು ಇತರರಿದ್ದರು.

ಫಾಸ್ಟ್ ನ್ಯೂಸ್

## ಮಣ್ಣು ಆರೋಗ್ಯ ಕುರಿತು ತರಬೇತಿ





» **ಚಿತ್ರದುರ್ಗ**

ಜಿಲ್ಲೆಯ ಹಿರಿಯೂರು ತಾಲ್ಲೂಕಿನ ಉಡುವಳ್ಳಿಯ ಜವಾಹರ್ ವಿದ್ಯಾಲಯ ಶಾಲೆಯ ಮಕ್ಕಳಿಗೆ ಬುಧವಾರ ಮಣ್ಣು ಆರೋಗ್ಯ ಕುರಿತು ತರಬೇತಿ ನೀಡಲಾಯಿತು.

ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಶಾಲಾ ಮಕ್ಕಳಿಗೆ ಮಣ್ಣು ಆರೋಗ್ಯ ಅಭಿಯಾನ ಕುರಿತು ಕಾರ್ಯಕ್ರಮಆಯೋಜಿಸಿದ್ದು,6ನೇತರಗತಿಯಿಂದ 12ನೇ ತರಗತಿವರೆಗಿನ ಮಕ್ಕಳಿಗೆ ಮಣ್ಣು ಆರೋಗ್ಯ ಕುರಿತು ತರಬೇತಿ ನೀಡಲಾಯಿತು.

ತರಬೇತಿ ಕಾರ್ಯಕ್ರಮದಲ್ಲಿ ಯೋಜನೆಯ ಉದ್ದೇಶ, ಮಣ್ಣು ಮಾದರಿ ಸಂಗ್ರಹಣೆ, ವಿಶ್ಲೇಷಣೆ, ಮಣ್ಣು ಆರೋಗ್ಯ ಚೀಟಿ ತಯಾರಿ ಕುರಿತು ಮಾಹಿತಿ ನೀಡಲಾಯಿತು. ಜವಹಾರ್ ವಿದ್ಯಾಲಯ ಶಾಲೆಯ ಒಟ್ಟು 60 ವಿದ್ಯಾರ್ಥಿಗಳು ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ ಜಂಟಿ ಕೃಷಿ ನಿರ್ದೇಶಕ ಬಿ.ಮಂಜುನಾಥ್, ಉಪ ಕೃಷಿ ನಿರ್ದೇಶಕ ಬಿ.ಎನ್.ಪ್ರಭಾಕರ್, ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿ ಡಾ.ರವಿಕುಮಾರ್, ಜವಾಹರ್ ಶಾಲೆಯ ಮುಖ್ಯ ಶಿಕ್ಷಕ ರೆಟನಾಕುಮಾರ್ ಡೇನಿಯಲ್, ಸಹಾಯಕ ಕೃಷಿ ನಿರ್ದೇಶಕಿ ಟಿ.ಪಿ. ರಂಜಿತಾ, ಕೃಷಿ ಅಧಿಕಾರಿ ಪಾರ್ವತಮ್ಮ, ಆತ್ಮ ಸಿಬ್ಬಂದಿ, ಶಾಲೆಯ ಶಿಕ್ಷಕರು ಹಾಗೂ ಇತರರು ಹಾಜರಿದ್ದರು.

# ರಾಮನವಮಿ ಪ್ರಯುಕ್ತ ವಿವಿಧ ದೇವಾಲಯಗಳಲ್ಲಿ ವಿಶೇಷ ಪೂಜೆ











ರಾಮನವಮಿ ಅಂಗವಾಗಿ ನಗರದ ವಿವಿಧ ದೇವಾಲಯಗಳಲ್ಲಿ ಬುಧವಾರ ವಿಶೇಷವಾಗಿ ಪೂಜೆ ಸಲ್ಲಿಸಲಾಯಿತು. ನಗರ ಪೊಲೀಸ್ ಠಾಣೆ ಆವರಣದಲ್ಲಿರುವ ಕಣಿವೆಮಾರಮ್ಮ ದೇವಸ್ಥಾನದ ಮುಂಭಾಗ ರಾಮ ಸೀತೆಯ ಫೋಟೋ ಇರಿಸಿ ಶ್ರದ್ಧಾಭಕ್ತಿಯಿಂದ ಪೂಜಿಸಿ ನೂರಾರು ಭಕ್ತರಿಗೆ ಕೋಸಂಬರಿ ಪಾನಕ ವಿತರಿಸಲಾಯಿತು. ರಂಗಯ್ಯನಬಾಗಿಲು ಸಮೀಪವಿರುವ ರಾಮನ ದೇವಸ್ಥಾನ ಹಾಗೂ ಶ್ರೀರಾಮನ ಪರಮಭಂಟ ಆಂಜನೇಯನ ದೇವಸ್ಥಾನಗಳಲ್ಲಿಯೂ ವಿಶೇಷವಾಗಿ ಪೂಜಿಸಲಾಯಿತು. ಬನ್ನಿಮಹಾಕಾಳಮ್ಮ, ಆನೆ ಬಾಗಿಲು ಸಮೀಪವಿರುವ ಆಂಜನೇಯಸ್ವಾಮಿ ಹಾಗೂ ಅಂಭಾ ಭವಾನಿ ದೇವಸ್ಥಾನದಲ್ಲಿ ಶ್ರೀರಾಮ ಸೀತಾಮಾತೆಯನ್ನು ಪೂಜಿಸಲಾಯಿತು. ಬಹುತೇಕ ದೇವಾಲಯಗಳಲ್ಲಿ ಕೋಸಂಬರಿ ಪಾನಕ ಹಂಚಲಾಯಿತು.

# ರಾಹುಲ್ ಮೊದಲು ಕಾಂಗ್ರೆಸ್ ಹಗರಣಗಳನ್ನು ಏಕೆ ಮುಚ್ಚಿಡುತ್ತಿದ್ದಾರೆ ಎನ್.ರವಿಕುಮಾರ್ ಪ್ರಶ್ನೆ?

» **ಚಿತ್ರದುರ್ಗ**

ಕಾಂಗ್ರೆಸ್ ಅಭ್ಯರ್ಥಿಗಳ ಪರ ಪ್ರಚಾರಕ್ಕಾಗಿ ರಾಜ್ಯದಲ್ಲಿ ಪ್ರವಾಸ ಮಾಡುತ್ತಿರುವ ರಾಹುಲ್‌ಗಾಂಧಿ ಪ್ರಧಾನಿ ನರೇಂದ್ರಮೋದಿ ಆಡಳಿತದ ಪಾರದರ್ಶಕತೆಯನ್ನು ಪ್ರಶ್ನಿಸುವ ಮೊದಲು ಕಾಂಗ್ರೆಸ್‌ನಲ್ಲಿ ನಡೆದಿರುವ ಹಗರಣಗಳ ಬಗ್ಗೆ ಉತ್ತರ ನೀಡಲಿ ಎಂದು ವಿಧಾನಪರಿಷತ್ ಸದಸ್ಯ ಎನ್.ರವಿಕುಮಾರ್ ಪ್ರಶ್ನಿಸಿದರು.

ಬಿಜೆಪಿ. ಕಚೇರಿಯಲ್ಲಿ ಬುಧವಾರ ಸುದ್ದಿಗೋಷ್ಟಿಯಲ್ಲಿ ಮಾತನಾಡಿದ ಅವರು ಮನಮೋಹನ್‌ಸಿಂಗ್ ದೇಶದ ಪ್ರಧಾನಿಯಾಗಿದ್ದಾಗ ಹದಿಮೂರು ಲಕ್ಷ ಕೋಟಿ ರೂ.ಗಳ ಹಗರಣವಾಗಿದೆ. ಟು–ಜಿ ಸ್ಪೆಕ್ಟ್ರಂ, ಕಲ್ಲಿದ್ದಲು, ಹಾಗೂ ಹೆಲಿಕ್ಯಾಪ್ಟರ್ ಹಗರಣಕ್ಕೆ ಯಾರು ಹೊಣೆ? ಚುನಾವಣಾ ಬಾಂಡ್‌ಗಳ ಮೂಲಕ ಬಿಜೆಪಿ. ಕೋಟಿಗಟ್ಟಲೆ ಹಣ ಸಂಗ್ರಹಿಸುತ್ತಿದೆ ಎಂದು ಆಪಾದನೆ ಮಾಡುತ್ತಿರುವ ರಾಹುಲ್‌ಗಾಂಧಿಗೆ ನರೇಂದ್ರಮೋದಿರವರ ಪ್ರಾಮಾಣಿಕ ಆಡಳಿತವನ್ನು ಪ್ರಶ್ನಿಸುವ ಅಧಿಕಾರವಿಲ್ಲ ಎಂದು ತಿರುಗೇಟು ನೀಡಿದರು.

ಚುನಾವಣಾ ಬಾಂಡ್‌ಗಳ ಮೂಲಕ ನಮ್ಮ ಪಕ್ಷಕ್ಕೆ ಶೇ.37 ರಷ್ಟು ಹಣ ಬಂದಿದ್ದರೆ. ಬೇರೆ ಪಕ್ಷಗಳಿಗೆ ಶೇ.67 ರಷ್ಟು ಹಣ ಸಂಗ್ರಹವಾಗಿದೆ. ಮೋದಿ ಆಡಳಿತವನ್ನು ಇಡಿ ವಿಶ್ವ ಮೆಚ್ಚಿಕೊಂಡಿದೆ.




ರಾಹುಲ್‌ಗಾಂಧಿಗೆ ಟೀಕಿಸುವ ನೈತಿಕತೆಯಿಲ್ಲ ಎಂದು ಸವಾಲೆಸೆದರು.

ರಾಜ್ಯದಲ್ಲಿ 692 ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ರೈತರಿಗೆ ಅನ್ಯಾಯ ಮಾಡುತ್ತಿರುವ ರಾಜ್ಯ ಕಾಂಗ್ರೆಸ್ ಸರ್ಕಾರ ಬಿಜೆಪಿ. ಅಧಿಕಾರದಲ್ಲಿದ್ದಾಗ ರೈತರಿಗೆ ನೀಡುತ್ತಿದ್ದ ನಾಲ್ಕು ಸಾವಿರ ರೂ.ಗಳನ್ನು ಏಕೆ ನಿಲ್ಲಿಸಿದೆ. ಎಸ್ಸಿ. ಎಸ್ಟಿ. ಓ.ಬಿ.ಸಿ. ಮಕ್ಕಳ ಸ್ಕಾಲರ್‌ಶಿಪ್ ರದ್ದುಪಡಿಸಿದೆ. ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ಹದಗೆಟ್ಟಿದೆ. ವಿಧಾನಸೌಧದಲ್ಲಿ ಪಾಕಿಸ್ತಾನ ಜಿಂದಾಬಾದ್ ಎಂದು ಕೂಗುವವರ ವಿರುದ್ದ ಇದುವರೆವಿಗೂ ಕ್ರಮ ಕೈಗೊಳ್ಳಲು ಆಗದ ಕಾಂಗ್ರೆಸ್‌ಗೆ ನಿಜವಾಗಿಯೂ ನಾಚಿಕೆಯಾಗಬೇಕು. ಗುತ್ತಿಗೆದಾರರ ಸಂಘದ ಅಧ್ಯಕ್ಷ ಕೆಂಪಣ್ಣ ಕಾಂಗ್ರೆಸ್ ಅರವತ್ತು ಪರ್ಸೆಂಟ್ ಕಮೀಷನ್ ಸರ್ಕಾರ ಎನ್ನುವುದನ್ನು ಬಹಿರಂಗಪಡಿಸಿದ್ದಾರೆ.

ಬಿ.ಎಸ್.ಯಡಿಯೂರಪ್ಪ ರಾಜ್ಯದ ಮುಖ್ಯಮಂತ್ರಿಯಾಗಿದ್ದಾಗ ನೆರೆ ಬಂದ ಸಂದರ್ಭದಲ್ಲಿ ಕೇಂದ್ರದ ನೆರವನ್ನು ಎದುರು ನೋಡದೆ ಎನ್.ಡಿ.ಆರ್.ಎಫ್.ನಿಯಮ ಮೀರಿ ಒಂದೊಂದು ಮನೆಗೆ ಐದು ಲಕ್ಷ ರೂ.ಗಳನ್ನು ಕೊಟ್ಟರು. ಕಾಂಗ್ರೆಸ್ ಸರ್ಕಾರದಲ್ಲಿ ಒಂದು ಕಿ.ಮೀ. ರಸ್ತೆಯೂ ಆಗಿಲ್ಲ. ಗುಂಡಿ ಬಿದ್ದ ರಸ್ತೆಗೆ ಮಣ್ಣು ಹಾಕಿ ಮುಚ್ಚಿಲ್ಲ. ಭ್ರಷ್ಟಾಚಾರ, ಗೂಂಡಾಗಿರಿ ಮಿತಿ ಮೀರಿದೆ. ಕುಡಿಯುವ ನೀರಿಗೆ ಹಾಹಾಕಾರವಿದೆ. ಜನವಿರೋಧಿ ಕಾಂಗ್ರೆಸ್ ಸರ್ಕಾರದ ಬಗ್ಗೆ ರಾಹುಲ್‌ಗಾಂಧಿ ಏಕೆ ಮಾತನಾಡುತ್ತಿಲ್ಲ. ಪ್ರಧಾನಿ ನರೇಂದ್ರಮೋದಿರವರು ಪ್ರತಿ ಮನೆಗಳ ಮೇಲೆ ಸೋಲಾರ್ ಪ್ಲಾಂಟ್‌ಗಳನ್ನು ಅಳವಡಿಸುವ ಚಿಂತನೆಯಲ್ಲಿದ್ದಾರೆ.

# ಕಾಂಗ್ರೆಸ್ ಗ್ಯಾರೆಂಟಿ ಕಾರ್ಡ್ ಮಹಿಳೆಯರಿಗೆ ವಿತರಿಸಿದ ಮುನಿರಾ ಎ.ಮಕಾಂದಾರ್



» **ಚಿತ್ರದುರ್ಗ**

ನಗರದ ಹನ್ನೆರಡನೆ ವಾರ್ಡ್ ಅಗಸನಕಲ್ಲು ಫಾತಿಮ ಮಸೀದಿ ಸಮೀಪ ಕೇಂದ್ರ ಸರ್ಕಾರದ ಗ್ಯಾರೆಂಟಿ ಕಾರ್ಡ್‌ಗಳನ್ನು ವಿತರಿಸಲಾಯಿತು.

ಕರ್ನಾಟಕ ಪ್ರದೇಶ ಮಹಿಳಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಮುನಿರಾ ಎ.ಮಕಾಂದಾರ್ ಮಹಿಳೆಯರಿಗೆ ಗ್ಯಾರಂಟಿ ಕಾರ್ಡ್‌ಗಳನ್ನು ವಿತರಿಸಿ ಮಾತನಾಡುತ್ತ ಕಾಂಗ್ರೆಸ್‌ಗೆ ತ್ಯಾಗ ಬಲಿದಾನಗಳ ಇತಿಹಾಸವಿದೆ. ಕೋಮುವಾದಿ ಬಿಜೆಪಿ.ಯಲ್ಲಿ ಯಾರು ದೇಶದ ಸ್ವಾತಂತ್ರಕ್ಕಾಗಿ ಹೋರಾಡಿಲ್ಲ. ಇಂದಿರಾಗಾಂಧಿ ರಾಜೀವ್‌ಗಾಂಧಿ ಇವರುಗಳು ದೇಶಕ್ಕಾಗಿ ಪ್ರಾಣ ಅರ್ಪಿಸಿದ್ದಾರೆ. ನೆಹರು ಕುಟುಂಬದ ಕುಡಿ ರಾಹುಲ್‌ಗಾಂಧಿ ಭಾರತ್ ಜೋಡೋ ಯಾತ್ರೆ ಮೂಲಕ ಎಲ್ಲರ ಮನ ಗೆದ್ದಿದ್ದಾರೆ. ವಿಧಾನಸಭಾ ಚುನಾವಣಾ ಪೂರ್ವದಲ್ಲಿ ಕಾಂಗ್ರೆಸ್ ನೀಡಿದ ಭರವಸೆಯಂತೆ ಐದು ಗ್ಯಾರೆಂಟಿಗಳನ್ನು ಜನತೆಗೆ ನೀಡಿದೆ. ಅದೇ ರೀತಿ ಕೇಂದ್ರದಲ್ಲಿ ನಮ್ಮ ಸರ್ಕಾರ ಅಧಿಕಾರಕ್ಕೆ ಬಂದರೆ 25 ಗ್ಯಾರೆಂಟಿಗಳನ್ನು ನೀಡುವುದಾಗಿ ಘೋಷಿಸಿದೆ.




Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T